ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 175 RNI Number : KNKAN/25/A2770 03-07-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :175 ರಾಯಚೂರು 03-07-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಕ್ವಾರಿಯಲ್ಲಿ ಬಂಡೆ ಕುಸಿದು ಏಳು ಕಾರ್ಮಿಕರು ಸಾವು

ರಾಮನಗರ: ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಗುರುವಾರ ಬೆಳಗ್ಗೆ ಭಾರಿ ದುರಂತ ಸಂಭವಿಸಿದೆ. ಬೃಹತ್ ಕಲ್ಲು ಬಂಡೆಯೊಂದು ಕುಸಿದುಬಿದ್ದು ಏಳು ಜನ ಕಾರ್ಮಿಕರು ಮೃತಪಟ್ಟಿದ್ದಾರೆ. ಕಾವೇರಿ ಕ್ರಷರ್ ಮಾಲೀಕತ್ವಕ್ಕೆ ಸೇರಿದ ಕ್ವಾರಿಯಲ್ಲಿ ಈ ದುರ್ಘಟನೆ ಸಂಭವಿಸಿದೆ.

ತಾವರೆಕೆರೆಯ ಮಾದಪಟ್ಟಣದ ಹುಲುವೇನಹಳ್ಳಿ ಗ್ರಾಮದ ವ್ಯಾಪ್ತಿಯ ಸುಮಾರು 3.20 ಎಕರೆ ಪ್ರದೇಶದಲ್ಲಿ ಈ ಕಲ್ಲು ಗಣಿಗಾರಿಕೆ ನಡೆಯುತ್ತಿತ್ತು. 30 ವರ್ಷಕ್ಕೆ ಕ್ವಾರಿಯನ್ನು ಗುತ್ತಿಗೆ ಆಧಾರದಲ್ಲಿ ಕಲ್ಲುಗಣಿಗಾರಿಕೆ ಲೈಸೆನ್ಸ್ ಪಡೆದು ಗಣಿಗಾರಿಕೆ ನಡೆಸಲಾಗುತ್ತಿತ್ತು ಎಂಬ ಮಾಹಿತಿ ಸಿಕ್ಕಿದೆ.

ಕ್ವಾರಿಯಲ್ಲಿ ಬಂಡೆ ಮೇಲೆ ಕೆಲಸ ಮಾಡುತ್ತಿದ್ದ ವೇಳೆ ಬಂಡೆ ಕುಸಿದು ಏಳು ಕಾರ್ಮಿಕರು ಮೃತಪಟ್ಟಿದ್ದಾರೆ. ಜೆಸಿಬಿ ಮೂಲಕ ಮೃತದೇಹಗಳನ್ನು ಒಂದೊಂದಾಗಿ ಮೇಲಕ್ಕೆ ಎತ್ತಲಾಗುತ್ತಿದೆ. ಬಂಡೆಯ ಮೇಲಿನಿಂದ ಬಿದ್ದ ಏಳು ಕಾರ್ಮಿಕರು ಸ್ಥಳದಲ್ಲಿಯೇ ಉಸಿರುಚೆಲ್ಲಿದ್ದು, ಬಂಡೆಯ ಅಡಿಗೂ ಏಳು ಮಂದಿ ಸಿಲುಕಿರುವ ಶಂಕೆ ವ್ಯಕ್ತವಾಗಿದೆ. ಸದ್ಯ ನಾಲ್ವರ ಮೃತದೇಹ ಹೊರ ತೆಗೆಯಲಾಗಿದೆ ಎಂದು ವರದಿಯಾಗಿದೆ.

ಕಾವೇರಿ ಕಂಪನಿಗೆ ಸೇರಿದ ಕ್ರಶರ್‌ನಲ್ಲಿ ಈ ದುರಂತ ಸಂಭವಿಸಿದೆ. ಕಾರ್ಮಿಕರು ಹಿಟಾಚಿಯಲ್ಲಿ ಕೆಲಸ ಮಾಡುವ ವೇಳೆ ಬಂಡೆ ಕುಸಿದುಬಿದ್ದಿದೆ. ಈ ವೇಳೆ ಕಾರ್ಮಿಕರೂ ಕೂಡ ಕೆಳಕ್ಕೆ ಬಿದ್ದಿದ್ದಾರೆ. ಸ್ಥಳಕ್ಕೆ ತಾವರೆಕೆರೆ ಪೊಲೀಸರು



ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸ್ಥಳಕ್ಕೆ ರಾಮನಗರ ಎಸ್ಪಿ ಶ್ರೀನಿವಾಸ್ ಗೌಡ ಹಾಗೂ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳ ತಂಡದವರು ಭೇಟಿ ನೀಡಿ, ಪರಿಶೀಲಿಸಿದ್ದಾರೆ. ಮೃತರು ಬಿಹಾರ ಮೂಲದವರು ಎಂಬುದು ಪ್ರಾಥಮಿಕ ತನಿಖೆಯಲ್ಲಿ ಗೊತ್ತಾಗಿದೆ. ಬಂಡೆಯ ಕೆಳಗಡೆ ಮತ್ತಷ್ಟು ಮೃತದೇಹಗಳು ಇರುವುದಾಗಿ ಸ್ಥಳೀಯರು ಶಂಕಿಸಿದ್ದಾರೆ. ಸ್ಥಳದಲ್ಲಿ ಜೆಸಿಬಿ ಮೂಲಕ ಮೃತದೇಹಗಳನ್ನು ಮೇಲಕ್ಕೆ ತೆಗೆಯುವ ಪ್ರಯತ್ನ ಮಾಡಲಾಗುತ್ತಿದೆ.

ತೀವ್ರವಾಗಿ ಗಾಯಗೊಂಡವವರಿಗೆ ಸ್ಥಳೀಯವಾಗಿ ಪ್ರಾಥಮಿಕ ಚಿಕಿತ್ಸೆ ನೀಡಿ, ಬಳಿಕ ಬೆಂಗಳೂರಿನ ಆರ್ ಆರ್ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ.

ವರದಿ ತರಿಸಿಕೊಂಡು ಕ್ರಮ- ಸಿಎಂ ಡಿಕೆಶಿ: ಕಲ್ಲು ಕ್ವಾರಿ ದುರ್ಘಟನೆ ಸಂಬಂಧ ವರದಿ ತರಿಸಿಕೊಂಡು ನಾನು ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಸದಾಶಿವನಗರ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಸಮೀಪದ ಮಾಗಡಿ ರಸ್ತೆಯಲ್ಲಿ ಕಲ್ಲು ಕ್ವಾರಿಯಲ್ಲಿ ದುರಂತ ಆಗಿದೆ. 7 ಜನ ಮೃತಪಟ್ಟಿದ್ದಾರೆ ಅಂತ ಮಾಹಿತಿ ಬಂದಿದೆ. ಬಾಡಿಗಳು ಸಿಕ್ಕಿವೆ, ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿದ್ದಾರೆ ಎಂದು ಹೇಳಿದರು.

ಸ್ಫೋಟ ಆಗಿಲ್ಲ ಅಂತ ಗೊತ್ತಾಗಿದೆ. ಇಂದು ಮಧ್ಯಾಹ್ನ ರಿಪೋರ್ಟ್ ತರಿಸಿಕೊಳ್ತೇನೆ. ಕ್ವಾರಿ ಲೀಗಲಾ ಅಥವಾ ಕಾನೂನುಬಾಹಿರನಾ ಅಂತ ಗೊತ್ತಾಗಬೇಕು. ನಿಯಮ ಪಾಲಿಸಬೇಕಾಗಿದೆ. ವರದಿ ತರಿಸಿಕೊಂಡು ನಾನು ಕ್ರಮ ತೆಗೆದುಕೊಳ್ಳುತ್ತೇನೆ. ಪರಿಹಾರ ಕೊಟ್ಟ ಮೇಲೆ ಮೃತಪಟ್ಟವರು ವಾಪಸ್ ಬರಲ್ಲ ಎಂದರು.

ಇದಕ್ಕೂ ಮುನ್ನ ಎಕ್ಸ್ ಪೋಸ್ಟ್ ಮಾಡಿರುವ ಅವರು, ಬೆಂಗಳೂರು ದಕ್ಷಿಣ ತಾಲೂಕಿನ ಮಾದಪಟ್ಟಣದಲ್ಲಿ ಕ್ರಷರ್ ಬಂಡೆ ಕುಸಿದು 7 ಮಂದಿ ಕಾರ್ಮಿಕರು ಮೃತಪಟ್ಟಿರುವುದು ತೀವ್ರ ದುಃಖವನ್ನುಂಟು ಮಾಡಿದೆ.

ಭಗವಂತ ಮೃತರ ಆತ್ಮಕ್ಕೆ ಚಿರಶಾಂತಿ ದಯಪಾಲಿಸಲಿ, ಕುಟುಂಬಸ್ಥರಿಗೆ ನೋವು ಭರಿಸುವ ಶಕ್ತಿ ನೀಡಲಿ ಹಾಗೂ ಗಾಯಾಳುಗಳು ಶೀಘ್ರವೇ ಗುಣಮುಖರಾಗಲಿ ಎಂದು ಪ್ರಾರ್ಥಿಸುತ್ತೇನೆ. ಕಲ್ಲು ಕ್ವಾರಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಜೀವ ರಕ್ಷಣೆ ಹಾಗೂ ಭದ್ರತೆ ಒದಗಿಸುವುದು ಕ್ವಾರಿ ಮಾಲೀಕರ ಕರ್ತವ್ಯವಾಗಿದೆ. ನಿಯಮ ಉಲ್ಲಂಘಿಸುವ ಕ್ವಾರಿಗಳ ವಿರುದ್ಧ ಸರ್ಕಾರ ಸೂಕ್ತ ಕ್ರಮಕೈಗೊಳ್ಳಲಿದೆ ಎಂದಿದ್ದಾರೆ.

ಅಕ್ರಮವಾಗಿ ಇಡೀ ರಾಜ್ಯದಲ್ಲಿ ಕ್ವಾರಿಗಳು ನಡೆಯುತ್ತಿವೆ: ಡಿಸಿಎಂ ಡಾ. ಜಿ.ಪರಮೇಶ್ವರ್ ಮಾತನಾಡಿ, ಕಲ್ಲು ಕ್ವಾರಿಯಲ್ಲಿ ಬಿಹಾರ ಮೂಲದ ಕಾರ್ಮಿಕರ ದುರ್ಮರಣ ಪ್ರಕರಣವಾಗಿ ಪ್ರತಿಕ್ರಿಯಿಸಿ, ಅದರ ಬಗ್ಗೆ ಮಾಹಿತಿ ತೆಗೆದುಕೊಳ್ಳುತ್ತೇನೆ. ಮಾಹಿತಿ ಪಡೆದು ನಮ್ಮ ಇಲಾಖೆಗೆ ಸಂಬಂಧಿಸಿದಂತೆ ಏನಾದರೂ ಇದ್ದರೆ ಆ್ಯಕ್ಷನ್ ತೆಗೆದುಕೊಳ್ಳುತ್ತೇನೆ. ಅಕ್ರಮವಾಗಿ ಏನಾದರೂ ಇದ್ದರೆ ನೋಡಬೇಕು. ಡೆಪ್ಯುಟಿ ಕಮಿಷನರ್ಸ್, ಗಣಿ ಇಲಾಖೆಯವರು ಅನುಮತಿ ಕೊಡುತ್ತಾರೆ. ಅದನ್ನು ಪರಿಶೀಲನೆ ಮಾಡಿ ಅದರ ಬಗ್ಗೆ ಏನು ಕ್ರಮ ತೆಗೆದುಕೊಳ್ಳಬೇಕು ನೋಡ್ತಾರೆ. ಅಕ್ರಮವಾಗಿ ಇಡೀ ರಾಜ್ಯದಲ್ಲಿ ಕ್ವಾರಿಗಳು ಬಹಳ ನಡೀತಿವೆ. ಅದನ್ನು ತಪ್ಪಿಸೋಕೆ ಏನು ಮಾಡಬೇಕೋ ಮಾಡುತ್ತೇವೆ ಎಂದರು.

ವೈದ್ಯರನ್ನು ಗೌರವಿಸುವುದು ಭಗವಂತನನ್ನು ಸ್ಮರಿಸಿದಂತೆ: ಡಾ. ಸುರೇಂದ್ರ ಬಾಬು

ರಾಯಚೂರು, ಜು.2-

ವಿಶ್ವ ವೈದ್ಯರ ದಿನಾಚರಣೆಯ ಅಂಗವಾಗಿ ನಗರದ ಪಂ. ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಎಸ್.ಕೆ.ಇ. ಪ್ಯಾರಾ ಮೆಡಿಕಲ್ ಕಾಲೇಜು ವತಿಯಿಂದ ಹಿರಿಯ ವೈದ್ಯರಿಗೆ ವಿಶೇಷ ಸನ್ಮಾನ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಭವ್ಯ ಸ್ವಾಗತ ಕಾರ್ಯಕ್ರಮವನ್ನು ಸಂಸ್ಥಾಪಕ ಅಧ್ಯಕ್ಷ ಡಾ. ಬಾಬುರಾವ ಎಂ. ಶೇಗುಣಸಿ ಅವರ ನೇತೃತ್ವದಲ್ಲಿ ಅದ್ಧೂರಿಯಾಗಿ ಆಯೋಜಿಸಲಾಯಿತು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ರಾಜಯೋಗಿನಿ ಬಿ.ಕೆ. ಸ್ಮಿತಾ ಅಕ್ಕ ಹಾಗೂ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಸುರೇಂದ್ರ ಬಾಬು ಹಿರಿಯ ವೈದ್ಯರ ಭಾವಚಿತ್ರಗಳಿಗೆ ಪುಷ್ಪಾ



ರ್ಚನೆ ಸಲ್ಲಿಸಿ ಜ್ಯೋತಿ ಬೆಳಗುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಸ್ಮಿತಾ ಅಕ್ಕ, ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪ್ರಾಯೋಗಿಕ ಜ್ಞಾನವನ್ನೂ ಸಂಪಾದಿಸಬೇಕು. ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುವಾಗ ಹಿರಿಯ ವೈದ್ಯರು, ಸಿಬ್ಬಂದಿ ಹಾಗೂ ವಿಶೇಷವಾಗಿ ರೋಗಿಯ ಮನಸ್ಥಿತಿಯನ್ನು ಅರ್ಥಮಾಡಿಕೊಂಡು ಮಾನವೀಯ ಸೇವೆ ಸಲ್ಲಿಸಬೇಕು. ಅಂತಹ ಸೇವೆಯಿಂದ ಸಮಾಜದ ಪ್ರೀತಿ-ವಿಶ್ವಾಸ ಗಳಿಸುವುದರ ಜೊತೆಗೆ ಪೋಷಕರು ಹಾಗೂ ಶಿಕ್ಷಣ ಸಂಸ್ಥೆಯ ಕೀರ್ತಿಯನ್ನೂ ಹೆಚ್ಚಿಸಬಹುದು ಎಂದು ಸಲಹೆ ನೀಡಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಸುರೇಂದ್ರ ಬಾಬು ಮಾತನಾಡಿ, ಜಿಲ್ಲೆಯಲ್ಲಿ ಅನೇಕ ಸಂಘ-ಸಂಸ್ಥೆಗಳಿದ್ದರೂ ವೈದ್ಯರನ್ನು ಒಂದೇ ವೇದಿಕೆಯಲ್ಲಿ ಗೌರವಿಸಿ ಸನ್ಮಾನಿಸುವ ಇಂತಹ ಕಾರ್ಯಕ್ರಮ ಅಪರೂಪವಾಗಿದೆ. ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಹಿರಿಯ ವೈದ್ಯರನ್ನು ಗೌರವಿಸುತ್ತಿರುವ ಡಾ. ಬಾಬುರಾವ ಶೇಗುಣಸಿಯವರ ಕಾರ್ಯ ಸಮಾಜಕ್ಕೆ ಮಾದರಿಯಾಗಿದೆ. ವೈದ್ಯರನ್ನು ಗೌರವಿಸುವುದು ಭಗವಂತನನ್ನು ಸ್ಮರಿಸಿದಂತೆ ಎಂಬ ಭಾವನೆಯಿಂದ ಈ ಕಾರ್ಯಕ್ರಮ ಆಯೋಜಿಸಿರುವುದು ಶ್ಲಾಘನೀಯ. ವಿದ್ಯಾರ್ಥಿಗಳು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಬಸವ ಆಸ್ಪತ್ರೆಯ ವೈದ್ಯ ಡಾ. ಬಸವರಾಜ ಎಂ. ಪಾಟೀಲ ಮಾತನಾಡಿ, ಯಾವುದೇ ಆಸ್ಪತ್ರೆಯ ಬೆನ್ನೆಲುಬು ಪ್ಯಾರಾ ಮೆಡಿಕಲ್ ಸಿಬ್ಬಂದಿಯೇ ಆಗಿದ್ದಾರೆ. ರೋಗಿಯ ಚಿಕಿತ್ಸೆ ಮತ್ತು ಆರೈಕೆಯಲ್ಲಿ ಅವರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಎಸ್.ಕೆ.ಇ. ಕಾಲೇಜಿನ ವಿದ್ಯಾರ್ಥಿಗಳಿಗೆ ಅಗತ್ಯವಿದ್ದರೆ ವೈದ್ಯರು ಉಚಿತವಾಗಿ ಉಪನ್ಯಾಸ ಹಾಗೂ ಮಾರ್ಗದರ್ಶನ ನೀಡಲು ಸದಾ ಸಿದ್ಧರಾಗಿದ್ದೇವೆ ಎಂದು ಘೋಷಿಸಿದರು.

ಸಂಸ್ಥಾಪಕ ಅಧ್ಯಕ್ಷ ಡಾ. ಬಾಬುರಾವ ಎಂ. ಶೇಗುಣಸಿ ಮಾತನಾಡಿ, ತಮ್ಮ ಆಹ್ವಾನವನ್ನು ಸ್ವೀಕರಿಸಿ ಕಾರ್ಯಕ್ರಮಕ್ಕೆ ಆಗಮಿಸಿದ ಹಿರಿಯ ವೈದ್ಯರಿಗೆ ಕೃತಜ್ಞತೆ ಸಲ್ಲಿಸಿದರು.

3ನೇಯ ಪುಟಕ್ಕೆ

ಸಿಂಧನೂರಿನಲ್ಲಿ ಜು.5ರಂದು ದಲಿತ ಸಾಹಿತ್ಯ ಪರಿಷತ್ತಿನ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ

ವಿಶೇಷ ಉಪನ್ಯಾಸ, ಸಾಧಕರಿಗೆ ಸನ್ಮಾನ; ಜಿಲ್ಲೆಯ ಪ್ರಗತಿಪರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ

ರಾಯಚೂರು, ಜು.2

: ದಲಿತ ಸಾಹಿತ್ಯ ಪರಿಷತ್ತು ರಾಯಚೂರು ಜಿಲ್ಲಾ ಘಟಕ ಹಾಗೂ ಜಿಲ್ಲೆಯ ಎಲ್ಲಾ ತಾಲೂಕು ಘಟಕಗಳ ಆಶ್ರಯದಲ್ಲಿ ನೂತನ ಪದಾಧಿಕಾರಿಗಳ ಪದಗ್ರಹಣ, ವಿಶೇಷ ಉಪನ್ಯಾಸ ಮತ್ತು ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಸಮಾರಂಭವು ಜುಲೈ 5ರಂದು (ಭಾನುವಾರ) ಸಿಂಧನೂರಿನ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಅದ್ಧೂರಿಯಾಗಿ ನಡೆಯಲಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಂಗಮುನಿದಾಸ ಗಾರಲದಿನ್ನಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮವನ್ನು ರಾಜ್ಯಾಧ್ಯಕ್ಷ ಡಾ. ಅರ್ಜುನ ಗೊಳಸಂಗಿ ಉದ್ಘಾಟಿಸಲಿದ್ದು, ಜಿಲ್ಲಾ ಅಧ್ಯಕ್ಷ ಡಾ. ಹುಸೇನಪ್ಪ ಅಮರಾಪುರ ಅಧ್ಯಕ್ಷತೆ ವಹಿಸಲಿದ್ದಾರೆ. ನಿಕಟಪೂರ್ವ ಜಿಲ್ಲಾಧ್ಯಕ್ಷ ತಾಯರಾಜ್ ಮರ್ಚಟ್ಹಾಳ ಧ್ವಜ ಹಸ್ತಾಂತರ ನೆರವೇರಿಸಲಿದ್ದಾರೆ. ಬೆಂಗಳೂರಿನ ಚಿಂತಕರಾದ ವಿಕಾಸ್ ಆರ್. ಮೌರ್ಯ ಅವರು ದಲಿತ ಲೋಕದ ಚಿಂತನ-ಮಂಥನ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಕಲಬುರಗಿ ವಿಭಾಗದ ಸಂಯೋಜಕ ಹೆಚ್.ಎಫ್. ಮಸ್ಕಿ, ಪ್ರಾಂಶುಪಾಲ ಮಹಾಂತಪ್ಪ ಕೊಡಗಲಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮಹಾಲಿಂಗಪ್ಪ ಇಂಗಳದಾಳ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ಜಿಲ್ಲೆಯ ಎಲ್ಲಾ ತಾಲೂಕು, ಮಹಿಳಾ, ಯುವ ಹಾಗೂ ವಿದ್ಯಾರ್ಥಿ ಘಟಕಗಳ ಪದಾಧಿಕಾರಿಗಳು ಪದಗ್ರಹಣ ಸ್ವೀಕರಿಸಲಿದ್ದಾರೆ. ಈ ಸಂದರ್ಭದಲ್ಲಿ ಪಿಹೆಚ್.ಡಿ. ಹಾಗೂ ಎಂ.ಬಿ.ಬಿ.ಎಸ್. ಪದವಿ ಪಡೆದ ಸಾಧಕರಾದ ಡಾ. ಕರಿಗೂಳಿ ಸುಂಕೇಶ್ವರ, ಡಾ. ಐಶ್ವರ್ಯ ಮಬ್ರುಮುರ್ಕ, ಡಾ. ಎಂ.ಆರ್. ಪುನೀತ್ ರಾಜಶೇಖರ ಹಾಗೂ ಡಾ. ವಿಜಯಲಕ್ಷ್ಮೀ ಮಬ್ರುಮುಕರ್ ಅವರನ್ನು

3ನೇಯ ಪುಟಕ್ಕೆ

ಜಿಲ್ಲೆಯನ್ನು ಬರಗಾಲ ಪ್ರದೇಶವೆಂದು ಘೋಷಿಸಲು ಆಗ್ರಹಿಸಿ ಮನವಿ

ಸಿಂಧನೂರು,ಜೂ.1-

ರಾಯಚೂರು ಜಿಲ್ಲೆಯಾದ್ಯಂತ ಈ ಬಾರಿ ಮಳೆ ಸಂಪೂರ್ಣ ಕೈಕೊಟ್ಟಿದ್ದು ಹಾಗಾಗಿ ರೈತರು ತೀವ್ರ ಸಂಕಷ್ಟದಲ್ಲಿ ಸಿಲುಕಿದ್ದಾರೆ. ಪ್ರತಿ ವರ್ಷ ಮೇ ಜೂನ್ ತಿಂಗಳಲ್ಲಿ ಬಿತ್ತನೆ ಕಾರ್ಯಗಳು ಆರಂಭವಾಗಿ. ಕೃಷಿ ಚಟುವಟಿಕೆಗಳು ನಡೆಯುತ್ತಿದ್ದವು. ಮಳೆ ಬಾರದ ಕಾರಣ ಎಲ್ಲಾ ಕೃಷಿ ಚಟುವಟಿಕೆಗಳು ನಿಂತು ಹೋಗಿವೆ. ಈ ಹಿನ್ನಲೆಯಲ್ಲಿ ರೈತರು ಕಾರ್ಮಿಕರು ಇತರೆ ಜನ ವರ್ಗದವರು ಪ್ರತಿನಿತ್ಯ ಕೌಟುಂಬಿಕ ಸಮಸ್ಯೆ ಅನುಭವಿಸುತ್ತಿದ್ದಾರೆ. ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಬರ ಪರಿಹಾರ ನಿಯಮಾವಳಿಗೆ ಕಾಯದೆ ಕೂಡಲೆ ಸರಕಾರ ರೈತರ ನೆರವಿಗೆ ಬರಬೇಕು. ರಾಜ್ಯವನ್ನು ಸಂಪೂರ್ಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕೆಂದು. ಕರ್ನಾಟಕ



ರೈತ ಸಂಘ ತಾಲೂಕು ಸಮಿತಿ ವತಿಯಿಂದ ತಹಸಿಲ್ದಾರರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು. ರಾಯಚೂರು ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶ ಒಂದು ಘೋಷಿಸಬೇಕು. ಎಲ್. ನೀನೋ. ಕಾರಣದಿಂದ ದೇಶದಲ್ಲಿ ಮಳೆ ಕೊರತೆ ಆಗುತ್ತದೆ ಎಂದು ಕೇಂದ್ರ ಸರ್ಕಾರದ ಹವಾಮಾನ ಇಲಾಖೆ ಈಗಾಗಲೇ ಘೋಷಿಸಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರಾಜ್ಯದ ಎಲ್ಲಾ ಜಿಲ್ಲೆಗಳನ್ನು ಬರಪೀಡಿತ ಜಿಲ್ಲೆಗಳೆಂದು ಘೋಷಿಸಬೇಕು. ಸರ್ಕಾರದ ವಿದ್ಯುತ್ತನ್ನು ಟಾಟಾ ಕಂಪನಿಗೆ ಗುತ್ತಿಗೆ ಕೊಡುವುದನ್ನು ಕೂಡಲೇ ನಿಲ್ಲಿಸಬೇಕು. ವಿದ್ಯುತ್ತನ್ನು ಖಾಸಗೀಕರಣ ಮಾಡುವ ತೀರ್ಮಾನವನ್ನು ಕೈಬಿಡಬೇಕು. ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ , ಕಾಯ್ದೆ ತಿದ್ದುಪಡಿಯಿಂದ ಈ ವರ್ಷ ರಾಯಚೂರು ಜಿಲ್ಲೆಯಲ್ಲಿ ಕಾಮಗಾರಿ ನಡೆದಿರುವುದಿಲ್ಲ. ಗ್ರಾಮೀಣ ಭಾಗದ ಜನರು ನಗರಗಳಿಗೆ ಗುಳ್ಳೆ ಹೋಗುತ್ತಿದ್ದಾರೆ. ಮನರೇಗಾ ವೈಫಲ್ಯದ ಕಾರಣದಿಂದ 2002 ರಲ್ಲಿ ಜಾರಿಯಲ್ಲಿದ್ದ ಕೂಲಿಗಾಗಿ ಕಾಳು ಯೋಜನೆ ಜಾರಿಗೊಳಿಸಿ. ಗ್ರಾಮೀಣ ಹಾಗೂ ಪಟ್ಟಣ ನಗರ ಪ್ರದೇಶಗಳ ಜನರಿಗೆ ಉದ್ಯೋಗ ಕಲ್ಪಿಸಿಕೊಡಬೇಕು. ಬರಗಾಲದಿಂದಾಗಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೆರೆಗಳು ಬತ್ತಿ ಹೋಗಿದ್ದು. ನೀರು ಸರಬರಾಜು ಬಹುತೇಕ ಕಡೆ ಸ್ಥಗಿತಗೊಂಡಿದೆ. ಹಳ್ಳ ಕೊಳ್ಳ ಹಾಗೂ ಕೆರೆಕಟ್ಟೆಗಳು ಬತ್ತಿ ಹೋಗಿವೆ. ಇದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿಗಾಗಿ ಜನ ಜಾನುವಾರುಗಳು ಆಹಾಕಾರ ಎದುರಿಸುತ್ತಿದ್ದಾರೆ. ಈ ಹಿಂದೆ ನಡೆದ. ಜೆ.ಜೆ.ಎಂ ಯೋಜನೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದ್ದು ಈ

3ನೇಯ ಪುಟಕ್ಕೆ

ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಹೋರಾಟದ ರಣಕಹಳೆ

ಸೆ.17ರಂದು ಕಲಬುರಗಿಯಲ್ಲಿ 10 ಸಾವಿರ ಜನರ ಬೃಹತ್ ಪ್ರತಿಭಟನೆ: ಸರ್ಕಾರಕ್ಕೆ ಎಚ್ಚರಿಕೆ

ರಾಯಚೂರು, ಜು.2-

ಶಿಕ್ಷಣ, ಆರೋಗ್ಯ, ನೀರಾವರಿ, ಉದ್ಯೋಗ ಹಾಗೂ ಮೂಲಸೌಕರ್ಯಗಳ ಅಭಿವೃದ್ಧಿಯಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಆಗುತ್ತಿರುವ ನಿರಂತರ ಅನ್ಯಾಯದ ವಿರುದ್ಧ ಸರ್ಕಾರದ ಮೇಲೆ ಒತ್ತಡ ಹೇರಲು ಸೆಪ್ಟೆಂಬರ್ 17ರಂದು ಕಲಬುರಗಿಯ ಎಚ್‌ಕೆಆರ್‌ಡಿಬಿ (ಕೆಕೆಆರ್‌ಡಿಬಿ) ಕಚೇರಿ ಎದುರು 10 ಸಾವಿರಕ್ಕೂ ಅಧಿಕ ಜನರನ್ನು ಸೇರಿಸಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಮುಖಂಡ ಚಾಮರಸ ಮಾಲಿಪಾಟೀಲ್ ಘೋಷಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಸಮಗ್ರ ಅಭಿವೃದ್ಧಿಗಾಗಿ ಹೋರಾಟಕ್ಕೆ ಅಧಿಕೃತ ಚಾಲನೆ ನೀಡಲಾಗಿದ್ದು, ಸರ್ಕಾರ ಬೇಡಿಕೆಗಳನ್ನು ಈಡೇರಿಸುವವರೆಗೆ ಹೋರಾಟ ನಿರಂತರವಾಗಿ



ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದರು.

ಜೂನ್ 30ರಂದು ಕೃಷ್ಣಗಿರಿಯ ವೆಸ್ಲಿ ಮನೆಯಲ್ಲಿ ಏಳು ಜಿಲ್ಲೆಗಳ ಪದಾಧಿಕಾರಿಗಳ ಪ್ರಥಮ ಸಭೆ ನಡೆದಿದ್ದು, ಪ್ರದೇಶದ ಸಮಸ್ಯೆಗಳ ಕುರಿತು ಸಮಗ್ರ ಚರ್ಚೆ ನಡೆಸಿ ಹೋರಾಟದ ರೂಪುರೇಷೆ ಸಿದ್ಧಪಡಿಸಲಾಗಿದೆ. ಜಿಲ್ಲೆಯ ಉಸ್ತುವಾರಿಯಾಗಿ ರಾಘವೇಂದ್ರ ಕುಷ್ಟಗಿ, ಬಸವರಾಜ್, ಲೀಲಾ ಸೇರಿದಂತೆ ಹಲವು ಮುಖಂಡರಿಗೆ ಜವಾಬ್ದಾರಿ ನೀಡಲಾಗಿದ್ದು, ಶೀಘ್ರದಲ್ಲೇ ಆಯಾ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಸಮಸ್ಯೆಗಳತ್ತ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ತಿಳಿಸಿದರು.

371(ಜೆ) ಬಗ್ಗೆ ಜಾಗೃತಿ ಅಭಿಯಾನ

ಸಂವಿಧಾನದ 371(ಜೆ) ವಿಶೇಷ ಸ್ಥಾನಮಾನದ ಕುರಿತು ಇನ್ನೂ ಅನೇಕ ಜನರಿಗೆ ಸಮರ್ಪಕ ಮಾಹಿತಿ ಇಲ್ಲ. ಈ ಹಿನ್ನೆಲೆಯಲ್ಲಿ ಆಗಸ್ಟ್ 8 ಮತ್ತು 9ರಂದು ತಾವರಗೇರಿಯ ಬೌದ್ಧ ವಿಹಾರದಲ್ಲಿ ವಿಶೇಷ ಜಾಗೃತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ಒಂದು ತಿಂಗಳೊಳಗೆ ಎಲ್ಲಾ ಜಿಲ್ಲೆಗಳಲ್ಲಿ ಹೋರಾಟ ಸಮಿತಿಗಳನ್ನು ರಚಿಸಿ ಜನರನ್ನು ಸಂಘಟಿಸಲಾಗುವುದು ಎಂದು ಅವರು ಹೇಳಿದರು. ಮುಖ್ಯಮಂತ್ರಿ ಎಲ್ಲ ಜಿಲ್ಲೆಗಳಿಗೂ ಬರಲಿ

ಹೈದರಾಬಾದ್-ಕರ್ನಾಟಕ ವಿಮೋಚನಾ

3ನೇಯ ಪುಟಕ್ಕೆ

ವಚನ ಸಾಹಿತ್ಯ ಉಳಿಸಿದ ಮಹಾನ್ ಸಂಶೋಧಕ ಡಾ. ಎಫ್.ಜಿ. ಹಳಕಟ್ಟಿ

ವಚನ ಸಾಹಿತ್ಯ ಸಂರಕ್ಷಣೆಗೆ ಅವರ ಕೊಡುಗೆ ಸ್ಮರಣೆ

ರಾಯಚೂರು, ಜು. 2

ಶರಣರ ಜೀವನ ಮೌಲ್ಯಗಳನ್ನು ಒಳಗೊಂಡಿದ್ದ ವಚನ ಸಾಹಿತ್ಯವು ಕಾಲಗರ್ಭದಲ್ಲಿ ಕಣ್ಮರೆಯಾಗದಂತೆ ಶೋಧಿಸಿ, ಸಂಗ್ರಹಿಸಿ, ಸಂಪಾದಿಸಿ ಹಾಗೂ ಪ್ರಕಟಿಸುವ ಮೂಲಕ ಕನ್ನಡ ಸಾಹಿತ್ಯ ಮತ್ತು ಸಂಶೋಧನಾ ಕ್ಷೇತ್ರಕ್ಕೆ ಡಾ. ಎಫ್.ಜಿ. ಹಳಕಟ್ಟಿಯವರು ಅಪಾರ ಕೊಡುಗೆ ನೀಡಿದ್ದಾರೆ ಎಂದು ರಾಯಚೂರಿನ ವಿಶ್ರಾಂತ ಪ್ರಾಂಶುಪಾಲರು ಹಾಗೂ ಸಂಶೋಧಕರಾದ ಡಾ. ಚನ್ನಬಸವಯ್ಯ ಹಿರೇಮಠ ಹೇಳಿದರು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,



ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಗುರುವಾರ ಆಯೋಜಿಸಿದ್ದ ಡಾ. ಎಫ್.ಜಿ. ಹಳಕಟ್ಟಿಯವರ ಜನ್ಮ ದಿನ ಹಾಗೂ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು, ಶರಣ ಸಾಹಿತ್ಯದ ಮಹತ್ವವನ್ನು ಉಳಿಸಿ ಬೆಳೆಸುವಲ್ಲಿ ಹಳಕಟ್ಟಿಯವರ ಪಾತ್ರ ಕನ್ನಡದ ಸಾಂಸ್ಕೃತಿಕ ಇತಿಹಾಸದಲ್ಲಿ ಅಜರಾಮ ರವಾಗಿದೆ ಎಂದು ಹೇಳಿದರು.


ಹಳಕಟ್ಟಿಯವರು ವಚನ ಸಾಹಿತ್ಯದ ಕಡೆಗೆ ಲಕ್ಷ್ಯ ಹರಿಸದೇ ಇದ್ದಿದ್ದರೆ ಇಂದು ಶಿವಶರಣರ ಅನೇಕ ವಚನಗಳು ನಮ್ಮ ಕೈಗೆ ಸಿಗುತ್ತಿರಲಿಲ್ಲ. ಸಾಮಾನ್ಯ ವಕೀಲರಾಗಿದ್ದರೂ ಶರಣರ ತತ್ವಾದರ್ಶಗಳಿಂದ ಪ್ರೇರಿತರಾಗಿ ಕತ್ತಲ ಕಾಲಗರ್ಭದಲ್ಲಿದ್ದ ವಚನಗಳನ್ನು ಬೆಳಕಿಗೆ ತಂದು ಕನ್ನಡಿಗರಿಗೆ ಅಮೂಲ್ಯ ಪರಂಪರೆಯನ್ನು ಉಳಿಸಿಕೊಟ್ಟಿದ್ದಾರೆ ಎಂದು ಅವರು ಹೇಳಿದರು.

ಡಾ. ಹಳಕಟ್ಟಿಯವರು ಧಾರವಾಡದಲ್ಲಿ ಪ್ರಾಥಮಿಕ ಶಿಕ್ಷಣ ಪಡೆದು, ಮುಂಬೈನ ಸೇಂಟ್ ಝೇವಿಯರ್ ಕಾಲೇಜಿನಲ್ಲಿ ಬಿ.ಎಸ್‌ಸಿ. ಹಾಗೂ ಎಲ್‌ಎಲ್‌ಬಿ ಪದವಿ ಪಡೆದ ನಂತರ ಬೆಳಗಾವಿಯಲ್ಲಿ ವಕೀಲಿ ವೃತ್ತಿ ಆರಂಭಿಸಿ, ನಂತರ ವಿಜಯಪುರದಲ್ಲಿ ಸಾರ್ವಜನಿಕ ಅಭಿಯೋಜಕರಾಗಿ ಸೇವೆ ಸಲ್ಲಿಸಿದರು. ವೃತ್ತಿಜೀವನದ ಜೊತೆಗೆ ವಚನ ಸಾಹಿತ್ಯ ಸಂರಕ್ಷಣೆಗೆ ತಮ್ಮ ಬದುಕನ್ನೇ ಮುಡಿಪಾಗಿಟ್ಟು ಕನ್ನಡ ಸಂಶೋಧನಾ ಕ್ಷೇತ್ರದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಪರಶುರಾಮ, ಹಿರಿಯ ಸಾಹಿತಿ ವೀರಹನುಮಾನ್, ತಾಲೂಕು ಕನ್ನಡ

3ನೇಯ ಪುಟಕ್ಕೆ

ಎಸ್‌ಐಆರ್ ಚುರುಕು: 1.61 ಲಕ್ಷ ಎಣಿಕೆ ನಮೂನೆ ವಿತರಣೆ



ರಾಯಚೂರು, ಜು.1

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಯಚೂರು ಜಿಲ್ಲೆಯಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಚುರುಕುಗೊಂಡಿದ್ದು, ಮತದಾರರಿಗೆ ಎಣಿಕೆ () ನಮೂನೆಗಳನ್ನು ವಿತರಿಸಲು ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ-ಮನೆಗೆ ಭೇಟಿ ನೀಡುತ್ತಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಬಿಡುಗಡೆ ಮಾಡಿದ ಪ್ರಕಟಣೆಯ ಪ್ರಕಾರ, ಜಿಲ್ಲೆಯಲ್ಲಿ ಒಟ್ಟು 17,14,559 ಮತದಾರರು ಹಾಗೂ 1,853 ಮತಗಟ್ಟೆಗಳು ಇವೆ. ಮನೆ-ಮನೆಗೆ ಭೇಟಿ ನೀಡಿ ಎಣಿಕೆ ನಮೂನೆಗಳನ್ನು ವಿತರಿಸುವ ಹಾಗೂ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ಜೂನ್ 30ರಿಂದ ಜುಲೈ 29ರವರೆಗೆ ನಡೆಯಲಿದ್ದು, ಇದೇ ಅವಧಿಯಲ್ಲಿ ದಾಖಲೆಗಳ ಡಿಜಿಟೈಸೇಶನ್ ಪ್ರಕ್ರಿಯೆಯೂ ಕೈಗೊಳ್ಳಲಾಗುತ್ತಿದೆ.

ಈವರೆಗೆ 1,61,672 ಎಣಿಕೆ ನಮೂನೆಗಳು (ಶೇ.9.43) ಮತದಾರರಿಗೆ ವಿತರಿಸಲಾಗಿದ್ದು, 27,900 ನಮೂನೆಗಳನ್ನು (ಶೇ.1.63) ಡಿಜಿಟೈಸೇಶನ್ ಮಾಡಲಾಗಿದೆ. ಅಲ್ಲದೆ, 262 ಮತದಾರರು ತಮ್ಮ ನಮೂನೆಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಿದ್ದಾರೆ.

ಪರಿಷ್ಕರಣೆ ವೇಳೆ 109 ಮೃತ

3ನೇಯ ಪುಟಕ್ಕೆ

ಮುಂಗಾರು ಹಂಗಾಮಿನ ನಿರ್ವಹಣೆಗೆ ಸೂಕ್ತ ಕ್ರಮ ಕೈಗೊಳ್ಳಿ: ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ

ಕೊಪ್ಪಳ ಜು,02-

ಜಿಲ್ಲೆಯಲ್ಲಿ ಪ್ರಸ್ತುತ ಬಿತ್ತನೆಯಾಗಿರುವ ಬೆಳೆಗಳಿಗೆ ಅವಶ್ಯವಿರುವ ರಸಗೊಬ್ಬರ ಮತ್ತು ಮುಂದೆ ಬಿತ್ತನೆಗೆ ಅಗತ್ಯವಿರುವ ಬೀಜ, ಗೊಬ್ಬರವನ್ನು ಸಮರ್ಪಕವಾಗಿ ಪೂರೈಸಿ ಮುಂಗಾರು ಹಂಗಾಮಿನ ನಿರ್ವಹಣೆಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಕೃಷಿ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಬುಧವಾರ (ಜುಲೈ 01) ಹಮ್ಮಿಕೊಂಡಿದ್ದ ಮುಂಗಾರು ಹಂಗಾಮಿನ ನಿರ್ವಹಣೆಯ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟಾರೆ 219 ಬಿತ್ತನೆ ಬೀಜ ಹಾಗೂ 99 ರಸಗೊಬ್ಬರ ಮಾದರಿಗಳನ್ನು ಗುಣಮಟ್ಟ ಪರಿಕ್ಷೇಗೆ ಒಳಪಡಿಸಲಾಗಿದ್ದು, ಅದರಲ್ಲಿ 8 ಬಿತ್ತನೆ ಬೀಜ ಮಾದರಿಗಳು ಕಳಪೆಯಾಗಿರುವ ಬಗ್ಗೆ ಕಂಡುಬಂದಿದ್ದು, ಈ ಬಗ್ಗೆ ಸಂಬಂಧಪಟ್ಟವರ ವಿರುದ್ಧ ಬೀಜ ಅಧಿನಿಯಮದನ್ವಯ ಕಾನೂನು ಕ್ರಮ ಕೈಗೊಳ್ಳಬೇಕು. ಜಿಲ್ಲೆಗೆ ಪೂರೈಕೆಯಾಗುವ ರಸಗೊಬ್ಬರವನ್ನು ರೈತರಿಗೆ ಸಮರ್ಪಕವಾಗಿ ವಿತರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು. ಮುಂಗಾರು ಮತ್ತು ಹಿಂಗಾರು ಹಂಗಾಮಿನ ಕಳಪೆ ಹಾಗೂ ನಕಲಿ ಬಿತ್ತನೆ ಬೀಜ ಮತ್ತು ಕೀಟನಾಶಕಗಳ ಮಾರಾಟವನ್ನು ತಡೆಗಟ್ಟಲು ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಕಾರ್ಯಪಡೆ ರಚಿಸಲಾಗಿದ್ದು, ಜಿಲ್ಲೆಯಾದ್ಯಂತ ಇರುವ ಬಿತ್ತನೆ ಬೀಜ ಕಾರ್ಯಪಡೆಯು ನಿರಂತರವಾಗಿ ಆಕಸ್ಮಿಕ ದಾಳಿಗಳನ್ನು ನಡೆಸಿ. ದಾಸ್ತಾನು ಮತ್ತು ಗುಣಮಟ್ಟವನ್ನು ಪರಿಶೀಲಿಸಬೇಕು ಎಂದರು.



ಜಿಲ್ಲೆಯಲ್ಲಿ ನಕಲಿ ಅಥವಾ ಕಳಪೆ ಕೃಷಿ ಪರಿಕರಗಳನ್ನು ಮಾರಾಟ ಮಾಡುವುದು ಕಂಡುಬಂದಲ್ಲಿ, ಅಂತಹ ಮಾರಾಟಗಾರರ ಪರವಾನಗಿಯನ್ನು ತಕ್ಷಣವೇ ಅಮಾನತುಗೊಳಿಸಬೇಕು. ಅಲ್ಲದೆ, ಬೀಜ ಕಾಯ್ದೆ 1966, ಬೀಜ ನಿಯಮಗಳು 1968 ಮತ್ತು ಕೀಟನಾಶಕಗಳ ಕಾಯ್ದೆ 1968 ಮತ್ತು ಕೀಟನಾಶಕ ನಿಯಮ 1971 ಮತ್ತು ತದನಂತರ ರೂಪಿಸಲಾಗಿರುವ ನಿಯಮಾವಳಿಗಳನ್ವಯ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಕ್ರಮ ಕೈಗೊಳ್ಳಬೇಕು. ರೈತರು ಕೃಷಿ ಪರಿಕರಗಳನ್ನು ಖರೀದಿಸುವಾಗ ಕಡ್ಡಾಯವಾಗಿ ಅಧಿಕೃತ ರಸೀದಿಯನ್ನು ಪಡೆಯುವಂತೆ ಮತ್ತು ಲೇಬಲ್ ಆಧಾರಿತ ಮಾಹಿತಿಯನ್ನು ಗಮನಿಸುವಂತೆ ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಮುಖಾಂತರ ರೈತರಿಗೆ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ಸೂಚನೆ ನೀಡಿದರು.

ಫಸಲ್ ಭೀಮಾ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಒತ್ತು ಕೊಡಬೇಕು. ಬೆಳೆ ನಷ್ಟ ಅನುಭವಿಸಿದಲ್ಲಿ ಬೆಳೆವಿಮೆ ಸೌಲಭ್ಯ ಪಡೆಯಲು ರೈತರಿಗೆ ಸಲಹೆ ಮಾಡಬೇಕು. ಬೆಳೆವಿಮೆ ಸೇರಿದಂತೆ ಇನ್ನಿತರ ಕೃಷಿ ಸಂಬಂಧಿ ಸೌಕರ್ಯಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಎಫ್ಐಡಿ ಹೊಂದುವ ಬಗ್ಗೆ ಸಹ ರೈತ ವರ್ಗಕ್ಕೆ ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸಲಹೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಹೇಮಂತ ಕುಮಾರ್, ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ.ಕೃಷ್ಣಮೂರ್ತಿ, ತೋಟಗಾರಿಕೆ ಜಂಟಿ ನಿರ್ದೇಶಕರಾದ ಕೃಷ್ಣ ಸಿ. ಉಕ್ಕುಂದ, ಉಪ ಕೃಷಿ ನಿರ್ದೇಶಕರಾದ ಎಲ್.ಸಿದ್ದೇಶ್ವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸಹಾಯಕ ಕೃಷಿ ಅಧಿಕಾರಿಗಳು, ರೈತ ಸಂಪರ್ಕ ಅಧಿಕಾರಿಗಳು, ಗೊಬ್ಬರ ಮಾರಾಟ ಕಂಪನಿಗಳ ಪ್ರತಿನಿಧಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.



ವಿಬಿಗ್ರಾಮ-ಜಿ ಯೋಜನೆ ಅನುಷ್ಠಾನಕ್ಕೆ ಅಧಿಕಾರಿಗಳಿಗೆ ತರಬೇತಿ

ಸಂಡೂರು/ಬಳ್ಳಾರಿ,ಜು.02-

ಗ್ರಾಮೀಣಾಭಿವೃದ್ಧಿ ಮತ್ತು ಉದ್ಯೋಗ ಖಾತೆಯ ಮಹತ್ವಾಕಾಂಕ್ಷೆಯ ವಿಬಿಗ್ರಾಮ-ಜಿ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಉದ್ದೇಶದಿಂದ ಸಂಡೂರು ತಾಲೂಕು ಪಂಚಾಯಿತಿಯ ಎಂ.ವೈ. ಘೋರ್ಪಡೆ ಸಭಾಂಗಣದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ತರಬೇತಿ ಕಾರ್ಯಾಗಾರ ನಡೆಯಿತು.

ಗ್ರಾಮೀಣ ಉದ್ಯೋಗ ವಿಭಾಗದ ಸಹಾಯಕ ನಿರ್ದೇಶಕ ವಸಂತ ರಾಜ್ ಅಧ್ಯಕ್ಷತೆ ವಹಿಸಿ, ಯೋಜನೆಯ ಉದ್ದೇಶ, ಅನುಷ್ಠಾನದ ವಿಧಾನ ಹಾಗೂ ವಿವಿಧ ಇಲಾಖೆಗಳ ಪಾತ್ರ ಕುರಿತು ಮಾಹಿತಿ ನೀಡಿದರು.

ಮಾಸ್ಟರ್ ಟ್ರೈನರ್ ಆಗಿ ಭಾಗವಹಿಸಿದ್ದ ಕುರುಕೋಡು ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ರೇಣುಕಾಚಾರ್ಯ ಸ್ವಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ನರೇಗಾ ಸಿಬ್ಬಂದಿಗೆ ಯೋಜನೆಯ ಮಾರ್ಗಸೂಚಿಗಳು, ಅನುಷ್ಠಾನದ ಹಂತಗಳು, ದಾಖಲೆ ನಿರ್ವಹಣೆ, ಇಲಾಖೆಗಳ ಸಮನ್ವಯ ಹಾಗೂ ಕ್ಷೇತ್ರಮಟ್ಟದ ಕಾರ್ಯವಿಧಾನಗಳ ಕುರಿತು ತರಬೇತಿ ನೀಡಿದರು.

ಕಾರ್ಯಾಗಾರದಲ್ಲಿ ವಿವಿಧ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಡೇಟಾ ಎಂಟ್ರಿ ಆಪರೇಟರ್‌ಗಳು, ತಾಂತ್ರಿಕ ಸಂಯೋಜಕರು, ಎಂಐಎಸ್ ಮತ್ತು ಐಇಸಿ ಸಂಯೋಜಕರು, ತಾಂತ್ರಿಕ ಹಾಗೂ ಆಡಳಿತ ಸಹಾಯಕರು, ಬಿಎಫ್‌ಟಿ ಸಿಬ್ಬಂದಿ ಮತ್ತು ಗ್ರಾಮ ಕಾಯಕ ಮಿತ್ರರು ಭಾಗವಹಿಸಿದ್ದರು.

ಯೋಜನೆಯನ್ನು ಗ್ರಾಮ ಮಟ್ಟದಲ್ಲಿ ಸಮರ್ಪಕವಾಗಿ ಜಾರಿಗೊಳಿಸಿ, ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಗ್ರಾಮೀಣ ಜನತೆಗೆ ಅದರ ಪ್ರಯೋಜನಗಳನ್ನು ತಲುಪಿಸುವ ಕುರಿತು ಕಾರ್ಯಾಗಾರದಲ್ಲಿ ಮಾರ್ಗದರ್ಶನ ನೀಡಲಾಯಿತು.

ವೈದ್ಯರದು ತ್ಯಾಗ ಮತ್ತು ಸೇವೆಯ ಬದುಕು: ಮಲ್ಲಿಕಾರ್ಜುನ ಸಾಸನೂರ

ಬಾಗಲಕೋಟೆ,ಜು.02-

ವೈದ್ಯರ ಜೀವನವೆಂದರೆ ತ್ಯಾಗ, ಸೇವೆ ಮತ್ತು ಮಾನವೀಯತೆಯ ಪ್ರತೀಕವಾಗಿದೆ. ಶನಿವಾರ-ಭಾನುವಾರ, ಹಬ್ಬ-ಹರಿದಿನ, ಹಗಲು-ರಾತ್ರಿ ಎನ್ನದೆ ರೋಗಿಗಳ ಆರೋಗ್ಯಕ್ಕಾಗಿ ಶ್ರಮಿಸುವ ವೈದ್ಯರು ಸಮಾಜಕ್ಕೆ ಅಮೂಲ್ಯ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಆಯ್? ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಹೇಳಿದರು.

ನಗರದ ಬಿ.ವಿ.ವಿ.ಎಸ್. ಹೋಮಿಯೋಪಥಿಕ್ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ ಬುಧವಾರ ಆಯೋಜಿಸಿದ್ದ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು ಸರಿಯಾದ ಚಿಕಿತ್ಸೆ ನೀಡಿ ರೋಗಿಗಳನ್ನು ಗುಣಪಡಿಸುವ ಮೂಲಕ ವೈದ್ಯರು ಅವರಿಗೆ ಪುನರ್ಜನ್ಮ ನೀಡುವ ಕೆಲಸ ಮಾಡುತ್ತಾರೆ. ಅಂತಹ ವೈದ್ಯರಿಗೆ ಗೌರವ ಸಲ್ಲಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿ ಸಿದ್ದ ಎಸ್. ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಉಪಪ್ರಾಚಾರ್ಯ ಡಾ. ಸಿ.ಎಸ್. ಹಿರೇಮಠ ಮಾತನಾಡಿ, ವೈದ್ಯರು ರೋಗಿಗಳೊಂದಿಗೆ ಶಾಂತಿ, ಸಹನೆ ಹಾಗೂ ಆತ್ಮೀಯತೆಯಿಂದ ವರ್ತಿಸ ಬೇಕು. ವೈದ್ಯರ ಪ್ರೋತ್ಸಾಹದ ಮಾತುಗಳೇ ರೋಗಿಯ ಅರ್ಧ ಕಾಯಿಲೆಯನ್ನು ಗುಣಪಡಿಸುವ ಶಕ್ತಿಯನ್ನು ಹೊಂದಿವೆ ಎಂದು ಭಾವಿ ವೈದ್ಯರಿಗೆ ಕಿವಿಮಾತು ಹೇಳಿದರು. ಬೆಂಗಳೂರಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗದ ಅಧ್ಯಕ್ಷ ಡಾ. ಆನಂದ ಹೊಸೂರ ಮಾತನಾಡಿ, ವೈದ್ಯಕೀಯ ಕ್ಷೇತ್ರ ನಿರಂತರವಾಗಿ ಬದಲಾಗುತ್ತಿರುವುದರಿಂದ ವೈದ್ಯರು ಜೀವನಪೂರ್ತಿ ವಿದ್ಯಾರ್ಥಿಗಳಾಗಿ ಹೊಸ ಜ್ಞಾನವನ್ನು ಅಳವಡಿಸಿಕೊಳ್ಳಬೇಕು. ಆಗ ಮಾತ್ರ ಯಶಸ್ವಿ ವೈದ್ಯರಾಗಲು ಸಾಧ್ಯ ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಅರುಣ ಹೂಲಿ ಮಾತನಾಡಿ, ಭಾರತ ರತ್ನ ಡಾ. ಬಿ.ಸಿ. ರಾಯ್ ಅವರ ಸೇವಾ ಮನೋಭಾವವನ್ನು ಪ್ರತಿಯೊಬ್ಬ ವೈದ್ಯರು ಅಳವಡಿಸಿಕೊಳ್ಳಬೇಕು. ಬಿಳಿ ಕೋಟು ಧರಿಸಿದ ಮಾತ್ರಕ್ಕೆ ಗೌರವ ದೊರೆಯುವುದಿಲ್ಲ. ಪ್ರಾಮಾಣಿಕ ಸೇವೆ, ಸೌಜನ್ಯಯುತ ವರ್ತನೆ ಮತ್ತು ರೋಗಿಗೆ ಅರ್ಥವಾಗುವ ಭಾಷೆಯಲ್ಲಿ ಆತ್ಮೀಯವಾಗಿ ಮಾತನಾಡುವುದರಿಂದಲೇ ಗೌರವ ಸಂಪಾದಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಭಾವಿ ವೈದ್ಯರಿಗೆ ಹೋಮಿಯೋಪಥಿ ಪಿತಾಮಹ ಡಾ. ಸ್ಯಾಮುಯೆಲ್ ಹಾನಿಮನ್ ಅವರ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಡಾ. ಶಶಿಕುಮಾರ ಇಜೇರಿ ರಾಷ್ಟ್ರೀಯ ವೈದ್ಯರ ದಿನಾಚರಣೆಯ ಇತಿಹಾಸ ಹಾಗೂ ಮಹತ್ವ ಕುರಿತು ಉಪನ್ಯಾಸ ನೀಡಿದರು. ಡಾ. ಸದಫ್ ಶೇಖ್ ಸ್ವಾಗತಿಸಿದರು. ಡಾ. ರವಿ ಕೋಟೆಣ್ಣವರ ವಂದಿಸಿದರು. ವಿದ್ಯಾರ್ಥಿನಿಯರಾದ ಗಂಗಾ ಹಾಗೂ ಸ್ನೇಹಾ ಕಾರ್ಯಕ್ರಮವನ್ನು ಪರಿಚಯಿಸಿದರು. ವಿದ್ಯಾಶ್ರೀ ನಿರೂಪಿಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಪ್ರಾಧ್ಯಾಪಕರಾದ ಡಾ. ತೃಪ್ತಿ ಶಿಂದೆ, ಡಾ. ವಿಜಯಲಕ್ಷ್ಮಿ ಪಾಟೀಲ, ಡಾ. ಸುಧೀರ ಬೆಟಗೇರಿ, ಡಾ. ರುದ್ರೇಶ್, ಡಾ. ಮಂಜುನಾಥ ಪಾಟೀಲ, ಡಾ. ದೀಪಕ್, , ಡಾ. ಜಯಲಕ್ಷ್ಮಿ ಪಾಟೀಲ, ಡಾ. ಪವನ ಟಾವನಿ ಸೇರಿದಂತೆ ವೈದ್ಯರು, ಕಲಿಕಾ ವೈದ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಕಾನೂನು ಉಲ್ಲಂಘಿಸಿದರೆ ಕಠಿಣ ಕ್ರಮ: ರೌಡಿಗಳಿಗೆ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಎಚ್ಚರಿಕೆ

ಕಲಬುರಗಿ,ಜು.02-

ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಸಮಾಜಘಾತುಕ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಅವರ ನೇತೃತ್ವದಲ್ಲಿ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯ ರೌಡಿಶೀಟರ್‌ಗಳ ರೌಡಿ ಪರೇಡ್ ನಡೆಸಲಾಯಿತು.

ಪರೇಡ್ ವೇಳೆ ರೌಡಿಶೀಟರ್‌ಗಳ ವಿರುದ್ಧ ದಾಖಲಾಗಿರುವ ಅಪರಾಧ ಪ್ರಕರಣಗಳ ಸಮಗ್ರ ಪರಿಶೀಲನೆ ನಡೆಸಿದ ಪೊಲೀಸ್ ಆಯುಕ್ತರು, ಯಾವುದೇ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿಕೊಳ್ಳದಂತೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಅಪರಾಧ ನಿಯಂತ್ರಣಕ್ಕಾಗಿ ರೌಡಿಶೀಟರ್‌ಗಳ ಮೇಲೆ ನಿರಂತರ ನಿಗಾ ವಹಿಸಲಾಗುತ್ತಿದ್ದು, ಈ ಕಾರ್ಯವನ್ನು ಇನ್ನಷ್ಟು ಪರಿಣಾಮಕಾರಿಯಾಗಿಸಲು ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಆಂಟಿ ರೌಡಿ ಸ್ಕ್ವಾಡ್ ರಚಿಸಲಾಗಿದೆ ಎಂದು ತಿಳಿಸಿದರು.

ನ್ಯಾಯಾಲಯಕ್ಕೆ ಹಾಜರಾಗದ ಹಾಗೂ ಪೊಲೀಸ್ ನೋಟಿಸ್‌ಗಳಿಗೆ ಸ್ಪಂದಿಸದ ರೌಡಿಶೀಟರ್‌ಗಳನ್ನು ಗುರುತಿಸಲಾಗಿದ್ದು, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.



ಪ್ರತಿ ಠಾಣೆ ವ್ಯಾಪ್ತಿಯ ಟಾಪ್-10 ರೌಡಿಶೀಟರ್‌ಗಳನ್ನು ಪರೇಡ್‌ಗೆ ಹಾಜರುಪಡಿಸಲಾಗಿದೆ ಎಂದು ಹೇಳಿದರು.

''ತಪ್ಪುಗಳನ್ನು ತಿದ್ದಿಕೊಂಡು ಉತ್ತಮ ಜೀವನ ನಡೆಸಲು ಬಯಸುವವರಿಗೆ ಅವಕಾಶ ನೀಡುತ್ತೇವೆ. ಆದರೆ ಕಾನೂನಿಗೆ ಸವಾಲು ಹಾಕುವವರ ವಿರುದ್ಧ ಯಾವುದೇ ರಾಜಿ ಇಲ್ಲ,'' ಎಂದು ಎಚ್ಚರಿಕೆ ನೀಡಿದ ಅವರು, ಇದುವರೆಗೆ 7 ರೌಡಿಶೀಟರ್‌ಗಳನ್ನು ಗೂಂಡಾ ಕಾಯ್ದೆಯಡಿ ಬಂಧಿಸಿದ್ದು, 21 ರೂಢಿಗತ ಅಪರಾಧಿಗಳನ್ನು ಗಡಿಪಾರು ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಇನ್ನೂ ಸಮಾಜಘಾತುಕ ಚಟುವಟಿಕೆಗಳಲ್ಲಿ ತೊಡಗಿರುವವರ ವಿರುದ್ಧ ಗೂಂಡಾ ಕಾಯ್ದೆಯಡಿ ಬಂಧನ ಹಾಗೂ ಗಡಿಪಾರು ಸೇರಿದಂತೆ ಕಠಿಣ ಕ್ರಮ ಕೈಗೊಳ್ಳುವ ಪ್ರಕ್ರಿಯೆ ಮುಂದುವರಿದಿದೆ ಎಂದು ತಿಳಿಸಿದರು.

ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಹಾಗೂ ಸಾರ್ವಜನಿಕರ ಸುರಕ್ಷತೆ ಕಾಪಾಡುವುದು ಪೊಲೀಸ್ ಇಲಾಖೆಯ ಪ್ರಮುಖ ಜವಾಬ್ದಾರಿಯಾಗಿದ್ದು, ಕಾನೂನು ಉಲ್ಲಂಘಿಸಿ ಮತ್ತೆ ಅಪರಾಧ ಕೃತ್ಯಗಳಲ್ಲಿ ತೊಡಗಿದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಆಯುಕ್ತರು ರೌಡಿಶೀಟರ್‌ಗಳಿಗೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಡಿಸಿಪಿ ಶಾಲೂ, ಹಿರಿಯ ಪೊಲೀಸ್ ಅಧಿಕಾರಿಗಳು, ವಿವಿಧ ಪೊಲೀಸ್ ಠಾಣೆಗಳ ಇನ್‌ಸ್ಪೆಕ್ಟರ್‌ಗಳು ಹಾಗೂ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

ಕೇಂದ್ರ ಕಾರಾಗೃಹದಲ್ಲಿ ಸಹಾಯಕ ಎಲೆಕ್ಟ್ರಿಕಲ್ ಟೆಕ್ನಿಷಿಯನ್ ತರಬೇತಿಗೆ ಚಾಲನೆ

ಕಲಬುರಗಿ,ಜು.02-

ಕಲಬುರಗಿ ಕೇಂದ್ರ ಕಾರಾಗೃಹ ಹಾಗೂ ಜನ ಶಿಕ್ಷಣ ಸಂಸ್ಥಾನ್ ಇವುಗಳ ಸಂಯುಕ್ತಾಶ್ರಯದಲ್ಲಿ ಕಾರಾಗೃಹದ ಬಂದಿ ನಿವಾಸಿಗಳಲ್ಲಿ ಪತ್ರಿ ತಂಡಕ್ಕೆ 40 ಜನ ಶಿಭಿರಾರ್ಥಿಗಳನ್ನು ಆಯ್ಕೆ ಮಾಡಿ ಹಮ್ಮಿಕೊಳ್ಳಲಾಗಿದ್ದ ಸಹಾಯಕ ಎಲೆಕ್ಟ್ರಿಕಲ್ ಟೆಕ್ನಿಷಿಯನ್ ತರಬೇತಿ ಕಾರ್ಯಕ್ರಮವವನ್ನು ಬುಧವಾರ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಚಾಲನೆ ನೀಡಿದರು.



ನಂತರ ಅವರು ಮಾತನಾಡಿ, ಸ್ವಾವಲಂಭಿಯಾಗಿ ಬದುಕನ್ನು ನಡೆಸುವುದಕ್ಕೆ ಈ ತರಬೇತಿಗಳು ತಮಗೆ ಸಹಾಯವಾಗಲಿದ್ದು, ಕಾರಾಗೃಹದಲ್ಲಿ ನೀಡುವ ವೃತ್ತಿಪರ ತರಬೇತಿಯ ಸದುಪಯೋಗ ಪಡೆದುಕೊಂಡು ಸಮಾಜದಲ್ಲಿ ಸ್ವಯಂ ಉದ್ಯೋಗವನ್ನು ಕಲ್ಪಿಸಿಕೊಂಡು ಉತ್ತಮವಾಗಿ ಬದುಕನ್ನು ನಡೆಸಬೇಕು ಎಂದರು.

ಗುಲಬರ್ಗಾ ಜನ ಶಿಕ್ಷಣ ಸಂಸ್ಥಾನ್‌ದ ನಿರ್ದೇಶಕ ಸುರೇಂದ್ರ ಪಾಟೀಲ್ ಮಾತನಾಡಿ, ತಮ್ಮ ಸಂಸ್ಥೆಯು ಸಾಮಾನ್ಯವಾಗಿ ಗ್ರಾಮೀಣ ಭಾಗದ ಜನರಿಗೆ ಉಚಿತವಾಗಿ ತರಬೇತಿಗಳನ್ನು ನೀಡುತ್ತಿದೆ. ಈ ಬಾರಿ ಕಲಬುರಗಿ ಕೇಂದ್ರ ಕಾರಾಗೃಹ ಬಂದಿ ನಿವಾಸಿಗಳಿಗೆ ತರಬೇತಿಗಳನ್ನು ನೀಡುವುದಕ್ಕೆ ತಮ್ಮ ಸಂಸ್ಥೆಯು ಮುಂದಾಗಿದ್ದು, ಪ್ರಾರಂಭದಲ್ಲಿ 40 ಶಿಬಿರಾರ್ಥಿಗಳಿಗೆ ಸಹಾಯಕ ಎಲೆಕ್ಟ್ರಿಕಲ್

ಟೆಕ್ನಿಷಿಯನ್ ತರಬೇತಿ ನೀಡುತ್ತಿದೆ. ಕಾರಾಗೃಹದ ಬಂದಿ ನಿವಾಸಿಗಳು ತರಬೇತಿಯ ಲಾಭ ಪಡೆದು ಸ್ವಯಂ ಉದ್ಯೋಗದ ಮುಖಾಂತರ ತಮ್ಮ ಜೀವನದ ಕಾಯಕಲ್ಪವನ್ನು ಕಟ್ಟಿಕೊಳ್ಳಬೇಕು ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕಲಬುರಗಿ ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕ ರಾಕೇಶ್ ಕಾಂಬಳೆ ಮಾತನಾಡಿ, ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆಯು ಹಲವಾರು ತರಬೇತಿಗಳನ್ನು ನೀಡುವ ಉದ್ದೇಶ ಹೊಂದಿದ್ದು, ಅದರ ಪ್ರಯುಕ್ತ, ಗುಲಬರ್ಗಾ ಜನ ಶಿಕ್ಷಣ ಸಂಸ್ಥಾನ್ ಮುಖಾಂತರ ಆಯ್ದ 40 ಜನ ಶಿಕ್ಷಾ ಬಂದಿಗಳಿಗೆ ಎಲೆಕ್ಟ್ರಿಶಿಯನ್ ತ ' ರ ' ಬ ' ೀ ತಿ ಯ ು ನ ' ು ಹಮ್ಮಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕ ಚನ್ನಪ್ಪ ಯಟಗಲ್ ಹಾಗೂ ಸಂಸ್ಥೆಯ ಸಹಾಯಕ ಆಡಳಿತಾಧಿಕಾರಿ ಭೀಮಾಶಂಕರ್ ಡಾಂಗೆ ಅವರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಜನ ಶಿಕ್ಷಣ ಸಂಸ್ಥೆಯ ಸಿಬ್ಬಂದಿಗಳಾದ ಬಸವರಾಜ ಡಾಬಾ, ರಾಜಶೇಕರ್ ಬಿರಾದಾರ್, ತರಬೇತಿದಾರರಾದ ಸೈಯಾದ್ ಬಿಲಾಲ್ ಹಾಗೂ ಸಂಸ್ಥೆಯ ಜೈಲರ್ ಆದ ಶ್ರೀಮಂತಗೌಡ ಪಾಟೀಲ್ ಹಾಗೂ ಕಾರಾಗೃಹದ ಸಿಬ್ಬಂದಿಗಳು ಭಾಗವಹಿಸಿದ್ದರು.

ಪ್ರಾ ರ ' ಂ ಭ ' ದ ' ಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕ ಬಿ ಸುರೇಶ್ ಸ್ವಾಗತಿಸಿದರು. ಈ ಸಂಸ್ಥೆಯ ಶಿಕ್ಷಕ ನಾಗರಾಜ ಮೂಲಗೆ ಕಾರ್ಯಕ್ರಮ ನಿರ್ವಹಿಸಿ ಕೊನೆಯಲ್ಲಿ ವಂದಿಸಿದರು. ಈ ಸಂಸ್ಥೆಯ ಬಂದಿ ಶಿವಶಂಕರ ಪ್ರಾರ್ಥನಾ ಗೀತೆಯನ್ನು ಹಾಡಿದರು.



ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಕನ್ನಡ ಪತ್ರಿಕಾ ದಿನಾಚರಣೆ ಆಚರಣೆ

ಬಾಗಲಕೋಟೆ,ಜು.02-

ಪತ್ರಿಕೋದ್ಯಮವೆಂದರೆ ಕೇವಲ ಒಂದು ವೃತ್ತಿಯಲ್ಲ, ಅದು ಸಮಾಜದತ್ತ ಇರುವ ಪವಿತ್ರ ಜವಾಬ್ದಾರಿಯಾಗಿದೆ. ಸತ್ಯವನ್ನು ಹುಡುಕುವ ಧೈರ್ಯ, ಜನರ ಧ್ವನಿಯಾಗುವ ಬದ್ಧತೆ ಹಾಗೂ ಇತಿಹಾಸವನ್ನು ದಾಖಲಿಸುವ ಹೊಣೆಗಾರಿಕೆಯೇ ಪತ್ರಿಕೋದ್ಯಮದ ನಿಜವಾದ ಮೌಲ್ಯಗಳಾಗಿವೆ ಎಂದು ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜಗನ್ನಾಥ ಚವ್ಹಾಣ ಹೇಳಿದರು.

ನಗರದ ಬಿ.ವಿ.ವಿ. ಸಂಘದ ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ ಆಶ್ರಯದಲ್ಲಿ ಕನ್ನಡ ಸಂಘ ಹಾಗೂ ಕನ್ನಡ ವಿಭಾಗದ ಸಹಯೋಗದಲ್ಲಿ ಬುಧವಾರ ಆಯೋಜಿಸಿದ್ದ ಕನ್ನಡ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸತ್ಯವನ್ನು ದಾಖಲಿಸಲು ಸಂಕಷ್ಟಗಳನ್ನು ಲೆಕ್ಕಿಸದೆ ಮೈದಾನಕ್ಕಿಳಿಯುವ ಪತ್ರಕರ್ತರು ಜನರ ಬದುಕಿನ ಕಥೆಗಳನ್ನು ಜಗತ್ತಿನ ಮುಂದೆ ತರುತ್ತಾರೆ. ಪತ್ರಕರ್ತರ ಪ್ರತಿಯೊಂದು ಬರಹ, ಛಾಯಾಚಿತ್ರ ಹಾಗೂ ವರದಿ ಕಾಲದ ಸಾಕ್ಷಿಯಾಗಿ ಉಳಿಯುತ್ತದೆ. ಸುದ್ದಿಗಳು ಕಾಲಕ್ರಮೇಣ ಹಳೆಯದಾಗಬಹುದು, ಆದರೆ ನಿಷ್ಠೆಯಿಂದ ಮಾಡಿದ ಪತ್ರಿಕೋದ್ಯಮ ಇತಿಹಾಸವಾಗಿ ಶಾಶ್ವತವಾಗಿರುತ್ತವೆ, ಇಂದಿನ ವಿದ್ಯಾರ್ಥಿಗಳು ಪತ್ರಿಕೆಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಪತ್ರಿಕೆಗಳ ಓದಿನಿಂದ ಸಾಮಾಜಿಕ ಅರಿವು, ಸಾಮಾನ್ಯ ಜ್ಞಾನ ಹಾಗೂ ಸಮಕಾಲೀನ ವಿದ್ಯಮಾನಗಳ ಬಗ್ಗೆ ತಿಳುವಳಿಕೆ ವೃದ್ಧಿಯಾಗುತ್ತದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಪತ್ರಿಕೆಗಳನ್ನು ಓದುವ ಮೂಲಕ ಕನ್ನಡ ಪತ್ರಿಕಾ ದಿನಾಚರಣೆಯನ್ನು ವಿಶಿಷ್ಟವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಐಕ್ಯೂಎಸಿ ಸಂಯೋಜಕರಾದ ಜಿ.ಎಂ. ನಾವದಗಿ, ಕನ್ನಡ ಸಂಘದ ಕಾರ್ಯಾಧ್ಯಕ್ಷರಾದ ಡಾ. ಎಂ. ನಂಜುಂಡಸ್ವಾಮಿ, ಕಾರ್ಯದರ್ಶಿ ಬಸವರಾಜ ವಿ. ಖೋತ, ಬಿಬಿಎ ವಿಭಾಗದ ಮುಖ್ಯಸ್ಥೆ ನಂದಿನಿ ದೊಡ್ಡಮನಿ, ಪಿಯುಸಿ ವಿಭಾಗದ ಉಪನ್ಯಾಸಕಿ ಸಂಗೀತ ಗರಗದಮಠ ಸೇರಿದಂತೆ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಿಂಧನೂರಿನಲ್ಲಿ. 24 ★7. ಶ್ರೀ ಸಿದ್ದಗಂಗಾ ಗ್ರಂಥಾಲಯ ಉದ್ಘಾಟನೆ

ಸಿಂಧನೂರು. ಜೂ.1

ನಗರದ ತಾಲೂಕು ಪಂಚಾಯಿತಿ ಎದುರುಗಡೆ ಇರುವ ನ್ಯೂ ಬೆಂಗಳೂರು ಬೇಕರಿಯ ಮೇಲ್ಭಾಗದಲ್ಲಿ ಸ್ಥಾಪಿಸಲಾಗಿರುವ. ಶ್ರೀ ಸಿದ್ದಗಂಗಾ 24 ★ 7 ಗ್ರಂಥಾಲಯವನ್ನು. ರೌಡುಕುಂದ ಸಂಸ್ಥಾನ ಮಠದ. ಶಿವಯೋಗಿ ಶಿವಾಚಾರ್ಯರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಗ್ರಂಥಾಲಯದ ಸಂಸ್ಥಾಪಕರಾದ. ವಕೀಲ.ಎಂ ಮಲ್ಲೇಶ್. ಮಾಚನೂರ ಮತ್ತು ವಕೀಲ ಹಾಗೂ ಪತ್ರಕರ್ತ ಹನುಮಂತ ಸಾಧು ಬ್ಯಾಗವಾಟ್. ಮಾತನಾಡಿ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ತಮ್ಮ ಗುರಿಯನ್ನು ತಲುಪಲು. ಏಕಾಗ್ರತೆ ಮತ್ತು ಶಾಂತಿಯುತ ವಾತಾವರಣ ಅತ್ಯಗತ್ಯ. ವಿದ್ಯಾರ್ಥಿಗಳಿಗೆ ಓದಲು ಅನುಕೂಲಕರವಾದ ಹಾಗೂ ನೆಮ್ಮದಿಯ ವಾತಾವರಣ ಕಲ್ಪಿಸುವ ಉದ್ದೇಶದಿಂದ ಈ 24 ★ 7 ಗಂಟೆಯ ಗ್ರಂಥಾಲಯವನ್ನು ತೆರೆಯಲಾಗಿದೆ ಎಂದು ತಿಳಿಸಿದರು. ಗ್ರಂಥಾಲಯಗಳು ಜ್ಞಾನದ ಭಂಡಾರ ಹಾಗೂ ಸಮಾಜದ ಆಧಾರ ಸ್ತಂಭಗಳು. ಗ್ರಂಥಾಲಯವಿಲ್ಲದ ಕೋಣೆ ಆತ್ಮವಿಲ್ಲದ ದೇಹವಿದ್ದಂತೆ ಎಂದು ಅಭಿಪ್ರಾಯಪಟ್ಟ ಅವರು. ಡಾಕ್ಟರ್ ಬಿಆರ್ ಅಂಬೇಡ್ಕರ್ ಅವರ ಮಾತನ್ನು ಸ್ಮರಿಸುತ್ತ ದೇಶದ ದೇವಾಲಯಗಳ ಮುಂದೆ ನಿಲ್ಲುವ ಸರದಿಯ ಸಾಲುಗಳು. ಗ್ರಂಥಾಲಯಗಳ ಮುಂದೆ ಕಾಣಿಸಿಕೊಂಡಾಗ ಮಾತ್ರ ದೇಶದ ನಿಜವಾದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ರಾಷ್ಟ್ರೀಯ ವೈದ್ಯರ ದಿನಾಚರಣೆ -ಸನ್ಮಾನ



ಸಿರುಗುಪ್ಪ- ರಾಷ್ಟ್ರೀಯ ವೈದ್ಯರ ದಿನದ ಅಂಗವಾಗಿ ಜೀವ ಉಳಿಸುವ ಕೈಗಳಿಗೆ ಹಾಗೂ ಭರವಸೆ ನೀಡುವ ಹೃದಯಗಳಿಗೆ ಗೌರವ ಸಲ್ಲಿಸುವ ಉದ್ದೇಶದಿಂದ ಲಾಡ್ ಖಾನ್ ಮಸೀದಿಯ ಅಧ್ಯಕ್ಷರಾದ ಎಸ್.ಎಂ. ಫಜಲ್ ಸಾಬ್ ಅವರು, ಮಾನವ ಸೇವೆಯೇ ಮಹಾ ಸೇವೆ ಎಂಬುದನ್ನು ತಮ್ಮ ನಿಸ್ವಾರ್ಥ ಸೇವೆಯ ಮೂಲಕ ಸಾಬೀತುಪಡಿಸಿರುವ ಎಲ್ಲಾ ವೈದ್ಯರಿಗೆ ಹೃತ್ಪೂರ್ವಕ ಗೌರವ ಮತ್ತು ಕೃತಜ್ಞತೆಗಳು ಎಂದು ತಿಳಿಸಿದರು.

ನಗರದ ಲಾಡ್ ಖಾನ್ ಮಸೀದಿಯ ಅಧ್ಯಕ್ಷರು ಎಸ್.ಎಂ.ಫಜಲ್ ಸಾಬ್ ಅವರು ರಾಘವೇಂದ್ರ ಸಾಯಿ ಆಸ್ಪತ್ರೆಯ ಡಾ.ರಾಜೇಶ್ ಬಂದಗಿ ಅವರಿಗೆ ಶಾಲು ಹೊದಿಸಿ, ಫಲ-ಪುಷ್ಪ ನೀಡಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಲಾಡ್ ಖಾನ್ ಮಸೀದಿಯ ಕಾರ್ಯದರ್ಶಿ ಹಬೀಬ್ ಸಾಬ್ ಉಪಸ್ಥಿತರಿದ್ದರು

ಉಗ್ರಾಣ ಕಾಮಗಾರಿಗೆ ಚಾಲನೆ

ಸಿರುಗುಪ್ಪ - ನಗರದ ಹೈಸ್ಕೂಲ್ ಮೈದಾನದಲ್ಲಿ 2025-26 ನೇ ಸಾಲಿನ ಮುಖ್ಯಮಂತ್ರಿಯವರ ಮೂಲಸೌಕರ್ಯ ಅಭಿವೃದ್ಧಿ ಸಿಎಂ ಐ ಡಿ ಪಿ ಯೋಜನೆ ಅಡಿಯಲ್ಲಿ ಮಂಜೂರಾದ 100 ಲಕ್ಷ ರೂ, ವೆಚ್ಚದ ಸಿರುಗುಪ್ಪ ನಗರದ ಶಿಕ್ಷಣ ಇಲಾಖೆಯ ಕ್ಷೇತ್ರ ಸಂಪನ್ಮೂಲ ಕೇಂದ್ರ ಹಾಗೂ ಪಠ್ಯ ಪುಸ್ತಕ ದಾಸ್ತಾನು ಉಗ್ರಾಣ ನಿರ್ಮಾಣದ ಕಾಮಗಾರಿಯ ಭೂಮಿ ಪೂಜೆಯನ್ನು ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಶಾಸಕ ಬಿ ಎಂ ನಾಗರಾಜ ಅವರು ನೆರವೇರಿಸಿದರು

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎನ್.ಕರಿಬಸಪ್ಪ

ಮುಖಂಡರುಗಳಾದ ದಮ್ಮೂರು ಸೋಮಪ್ಪ, ಕಾಯಿಪಲ್ಲೆ ಆರ್.ನಾಗರಾಜ, ನಾಂಚರಾಯ್ಯ, ಹೊಸಳ್ಳಿ ವೆಂಕಟರೆಡ್ಡಿ, ವಿ. ಗೋಪಾಲ, ಅನ್ಸಾರಿ ಇಸಾಕ್, ಬಿ.ವೆಂಕಟೇಶ್, ಹೆಚ್.ಗಣೇಶ್, ಬಿ.ಎಂ.ಅಪ್ಪಾಜಿ ನಾಯಕ, ಮೋದಿನ್, ಗೊರವರ ಶ್ರೀನಿವಾಸ, ಟಿ.ಸಿ.ಮೋಹನ ಹಾಗೂ ಕ್ಷೇತ್ರ ಸಮನ್ವಯ ಅಧಿಕಾರಿ ತಮ್ಮನ ಗೌಡ ಪಾಟೀಲ್, ಸಿಆರ್‌ಪಿ ಮಾರುತಿ, ಶಿಕ್ಷಣ ಇಲಾಖೆಯ ಅಧಿಕಾರಿಗಳು ಪಿಡಬ್ಲ್ಯೂಡಿ ಇಂಜಿನಿಯರ್ ರಾಕೇಶ್ ಹಾಗೂ ಮುಖಂಡರುಗಳು ಪಾಲ್ಗೊಂಡಿದ್ದರು.

ಒಂದನೇಯ ಪುಟದಿಂದ

ವಚನ ಸಾಹಿತ್ಯ ಉಳಿಸಿದ ಮಹಾನ್ ಸಂಶೋಧಕ ಡಾ. ಎಫ್.ಜಿ. ಹಳಕಟ್ಟಿ

ವಚನ ಸಾಹಿತ್ಯ ಸಂರಕ್ಷಣೆಗೆ ಅವರ ಕೊಡುಗೆ ಸ್ಮರಣೆ

ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ. ವಿಜಯರಾಜೇಂದ್ರ, ರಂಗಭೂಮಿ ಕಲಾವಿದ ವಿ.ಎನ್. ಹಕ್ಕಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಡಾ. ಎಫ್.ಜಿ. ಹಳಕಟ್ಟಿಯವರ ಸಾಧನೆಯನ್ನು ಸ್ಮರಿಸಿದರು.

ಎಸ್‌ಐಆರ್ ಚುರುಕು: 1.61 ಲಕ್ಷ ಎಣಿಕೆ ನಮೂನೆ ವಿತರಣೆ

ಮತದಾರರು, 100 ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರು ಹಾಗೂ 26 ಈಗಾಗಲೇ ನೋಂದಾಯಿತ ಮತದಾರರ ಪ್ರಕರಣಗಳು ಪತ್ತೆಯಾಗಿವೆ. ಒಟ್ಟು 241 ವಿಶೇಷ ಪ್ರಕರಣಗಳನ್ನು (ಎಸ್‌ಡಿಡಿಬ) ಗುರುತಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

ಮತದಾರರ ಪಟ್ಟಿಯನ್ನು ನಿಖರ ಮತ್ತು ಪಾರದರ್ಶಕವಾಗಿ ಸಿದ್ಧಪಡಿಸುವ ಉದ್ದೇಶದಿಂದ ಎಲ್ಲಾ ಮತದಾರರು ಬಿಎಲ್‌ಒಗಳಿಗೆ ಅಗತ್ಯ ದಾಖಲೆಗಳನ್ನು ಒದಗಿಸಿ, ಎಣಿಕೆ ನಮೂನೆಗಳನ್ನು ಸಕಾಲದಲ್ಲಿ ಭರ್ತಿ ಮಾಡಿ ಸಲ್ಲಿಸುವ ಮೂಲಕ ಎಸ್‌ಐಆರ್ ಪ್ರಕ್ರಿಯೆಗೆ ಸಹಕರಿಸುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

ಜಿಲ್ಲೆಯನ್ನು ಬರಗಾಲ ಪ್ರದೇಶವೆಂದು ಘೋಷಿಸಲು ಆಗ್ರಹಿಸಿ ಮನವಿ

ಯೋಜನೆಯ ಕಾಮಗಾರಿಗಳನ್ನು ಸಮಗ್ರ ತನಿಖೆಗೆ ಒಳಪಡಿಸಿ ತಪ್ಪಿತಸ್ತ ರ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಬೇಕು. ಮೇ ತಿಂಗಳಿನಲ್ಲಿ ಜಿಲ್ಲೆಯ ಕೆಲವು ಭಾಗದಲ್ಲಿ ಅಲ್ಪಸ್ವಲ್ಪ ಮಳೆಯಾಗಿದ್ದರಿಂದ. ರೈತರು ಬಿತ್ತನೆ ಕಾರ್ಯ ಮಾಡಿದ್ದರು. ಆದರೆ ಒಂದುವರೆ ತಿಂಗಳಿಂದ ಮಳೆ ಬಾರದೆ ಇರುವುದರಿಂದ ಬಿತ್ತನೆ ಮಾಡಿದ ಬೆಳೆ ಒಣಗಿ ಹೋಗಿದೆ. ಹಾಗಾಗಿ ಐದು ಎಕರೆಗಿಂತ ಕಡಿಮೆ ಇರುವ ಸಣ್ಣ ರೈತರಿಗೆ ಪ್ರತೀ ಎಕರೆಗೆ 25,000ರೂ. ಪರಿಹಾರ ನೀಡಬೇಕು. ರೈತರು ಕೃಷಿಗಾಗಿ ಸ್ಥಳೀಯ ಮತ್ತು ರಾಷ್ಟ್ರೀಯ ಬ್ಯಾಂಕುಗಳಲ್ಲಿ ಮಾಡಿರುವ ಸಾಲವನ್ನು ಮನ್ನಾ ಮಾಡಬೇಕು. ಜಾನುವಾರು ಸಾಕಣೆದಾರರ ಮನೆ-ಮನೆಗೆ ಮೇವು ಸರಬರಾಜು ಮಾಡಬೇಕು. ಎಂಬ ಹಕ್ಕುತ್ತಾಯದ. ಮನವಿ ಪತ್ರವನ್ನು ಶಿರಸ್ತೆದಾರ್ ವಾಣಿ ಅವರ ಮೂಲಕ. ರಾಜ್ಯದ ಮುಖ್ಯಮಂತ್ರಿಗಳಾದ.ಡಿ.ಕೆ. ಶಿವಕುಮಾರ್ ಅವರಿಗೆ ರವಾನಿಸಲಾಯಿತು. ಈ ಸಂದರ್ಭದಲ್ಲಿ ಸಂಘಟನೆಯ. ತಾಲೂಕು ಅಧ್ಯಕ್ಷರಾದ. ರಮೇಶ್ ಪಾಟೀಲ್ ಬೆರ್ಗಿ. ಬಿ ಎನ್. ಯರದಿಹಾಳ. ಗಂಗರಾಜ್ ಭೀಮರಾಜ್ ಕ್ಯಾಂಪ್. ಬಸವ ಕಡಬೂರು. ಯಮನೂರಪ್ಪ. ಮರಿಯಪ್ಪ ನಾಯಕ್. ನಿಂಗಪ್ಪ. ವೆಂಕಟೇಶ್ ಉದ್ಬಾಳ್. ನಿಂಗಪ್ಪ ಚಿಕ್ಕಬೇರ್ಗಿ. ಖಾಸಿಂಸಾಬ್. ಕರಿಯಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಹೋರಾಟದ ರಣಕಹಳೆ

ಸೆ.17ರಂದು ಕಲಬುರಗಿಯಲ್ಲಿ 10 ಸಾವಿರ ಜನರ ಬೃಹತ್ ಪ್ರತಿಭಟನೆ: ಸರ್ಕಾರಕ್ಕೆ ಎಚ್ಚರಿಕೆ

ದಿನಾಚರಣೆಯ ವೇಳೆ ಮುಖ್ಯಮಂತ್ರಿ ಕೇವಲ ಕಲಬುರಗಿಗೆ ಮಾತ್ರ ಸೀಮಿತವಾಗದೆ, ಕಲ್ಯಾಣ ಕರ್ನಾಟಕದ ಉಳಿದ ಜಿಲ್ಲೆಗಳಿಗೂ ಭೇಟಿ ನೀಡಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಜನರ ಸಮಸ್ಯೆಗಳನ್ನು ಆಲಿಸಬೇಕು ಎಂದು ಸಮಿತಿ ಒತ್ತಾಯಿಸಿತು.

ಕೃಷ್ಣಾ ನೀರಿನ ಬಳಕೆಯಲ್ಲಿ ಅನ್ಯಾಯ: ರಾಘವೇಂದ್ರ ಕುಷ್ಟಗಿ ಆರೋಪ

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿಯ ಪ್ರಮುಖ ಮುಖಂಡ ರಾಘವೇಂದ್ರ ಕುಷ್ಟಗಿ, ಕೃಷ್ಣಾ ನದಿಯ ಜಲಸಂಪತ್ತಿನ ನ್ಯಾಯಯುತ ಬಳಕೆ ಕಲ್ಯಾಣ ಕರ್ನಾಟಕಕ್ಕೆ ಸಿಗುತ್ತಿಲ್ಲ ಎಂದು ಆರೋಪಿಸಿದರು.

ನ್ಯಾಯಾಧಿಕರಣದ ತೀರ್ಪು ಪ್ರಕಟವಾಗಿ 13 ವರ್ಷಗಳಾದರೂ ಅಗತ್ಯ ಅಧಿಸೂಚನೆ ಹೊರಡಿಸದ ಕಾರಣ ಈ ಭಾಗದ ನೀರಾವರಿ ಯೋಜನೆಗಳಿಗೆ ಹಿನ್ನಡೆಯಾಗಿದೆ. ಅಲಮಟ್ಟಿ ಜಲಾಶಯದ ಎತ್ತರ ಹೆಚ್ಚಿಸುವ ವಿಷಯದಲ್ಲೂ ಸರ್ಕಾರ ನಿರ್ಲಕ್ಷ್ಯ ತೋರಿದ್ದು, ಅಪಾರ ಪ್ರಮಾಣದ ನೀರು ವ್ಯರ್ಥವಾಗಿ ಆಂಧ್ರ ಪ್ರದೇಶದ ಕಡೆ ಹರಿದು ಹೋಗುತ್ತಿದೆ ಎಂದು ದೂರಿದರು.

ಈ ಭಾಗದ ಜನಪ್ರತಿನಿಧಿಗಳ ಇಚ್ಛಾಶಕ್ತಿಯ ಕೊರತೆ ಹಾಗೂ ರಾಜ್ಯ-ಕೇಂದ್ರ ಸರ್ಕಾರಗಳ ನಿರಾಸಕ್ತಿಯಿಂದ ಕಲ್ಯಾಣ ಕರ್ನಾಟಕ ಅಭಿವೃದ್ಧಿಯಿಂದ ವಂಚಿತವಾಗಿದೆ. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯೂ ನಿರೀಕ್ಷಿತ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೃಷ್ಣಾ ಕಣಿವೆಯ ಜಲಸಂಪತ್ತಿನ ಸಮರ್ಪಕ ಬಳಕೆ ಹಾಗೂ ನೀರಿನ ಹಂಚಿಕೆ ಕುರಿತು ತಜ್ಞರನ್ನು ಆಹ್ವಾನಿಸಿ ಸೆಪ್ಟೆಂಬರ್ ಅಥವಾ ಅಕ್ಟೋಬರ್‌ನಲ್ಲಿ ರಾಷ್ಟ್ರೀಯ ಮಟ್ಟದ ವಿಶೇಷ ಸಿಂಪೋಸಿಯಂ ಆಯೋಜಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಬಿ. ಬಸವರಾಜ್, ಆರ್. ಬಸವರಾಜ್ ಹಾಗೂ ಜಾನ್ ವೆಸ್ಲಿ ಉಪಸ್ಥಿತರಿದ್ದರು.

ವೈದ್ಯರಿಗೆ ಗೌರವ - ಸೇವೆಗೆ ಸ್ಫೂರ್ತಿ

ವೈದ್ಯರನ್ನು ಗೌರವಿಸುವುದು ಭಗವಂತನನ್ನು ಸ್ಮರಿಸಿದಂತೆ

ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಉತ್ತಮ ಆರೋಗ್ಯ ಸೇವೆ ನೀಡಬೇಕು. ತಮ್ಮ ಕುಟುಂಬ, ಊರು ಹಾಗೂ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸುವಂತಹ ವೃತ್ತಿಪರರಾಗಬೇಕು ಎಂಬುದೇ ತಮ್ಮ ಆಶಯ ಎಂದು ಹೇಳಿದರು. ಈಗಾಗಲೇ ಕಾಲೇಜಿನ ಸಾವಿರಾರು ವಿದ್ಯಾರ್ಥಿಗಳು ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಕಾರ್ಯಕ್ರಮದಲ್ಲಿ 13 ಹಿರಿಯ ವೈದ್ಯ ದಂಪತಿಗಳನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಅಭಿನಂದನಾ ಪತ್ರಗಳನ್ನು ವಿತರಿಸಲಾಯಿತು. ಬಳಿಕ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಕಾಲೇಜಿನ ಆಡಳಿತಾಧಿಕಾರಿ ಶರಣಪ್ಪ ನಂದಿಹಾಳ, ಉಪನ್ಯಾಸಕರಾದ ವಿಕ್ರಮ್, ಚಂದ್ರಶೇಖರ, ಮಂಜುನಾಥ ಶಿವಪೂರ, ವ್ಯವಸ್ಥಾಪಕರಾದ ದೇವದಾಸ, ಸುಮಿತ್ರ, ಕನಕಮ್ಮ, ತನುಜಾ, ರಜಿನಿ, ಮೇರಿ ಸೇರಿದಂತೆ ಸಿಬ್ಬಂದಿ, ವಿದ್ಯಾರ್ಥಿ-ವಿದ್ಯಾರ್ಥಿನಿಯರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಸಿಂಧನೂರಿನಲ್ಲಿ ಜು.5ರಂದು ದಲಿತ ಸಾಹಿತ್ಯ ಪರಿಷತ್ತಿನ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ

ವಿಶೇಷ ಉಪನ್ಯಾಸ, ಸಾಧಕರಿಗೆ ಸನ್ಮಾನ; ಜಿಲ್ಲೆಯ ಪ್ರಗತಿಪರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ

ವಿಶೇಷವಾಗಿ ಸನ್ಮಾನಿಸಲಾಗುತ್ತದೆ.


ಜಿಲ್ಲೆಯ ಎಲ್ಲಾ ಪ್ರಗತಿಪರರು, ದಲಿತ ಮುಖಂಡರು, ವಿವಿಧ ಸಂಘಟನೆಗಳ ಹೋರಾಟ ಗಾರರು, ಬುದ್ಧಿಜೀವಿಗಳು, ಸಾಹಿತ್ಯಾಸಕ್ತರು ಹಾಗೂ ವಿದ್ಯಾರ್ಥಿ-ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ದಲಿತ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಡಾ. ಹುಸೇನಪ್ಪ ಅಮರಾಪುರ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಂಗಮುನಿದಾಸ ಗಾರಲದಿನ್ನಿ ಮನವಿ ಮಾಡಿದ್ದಾರೆ.

ರಾಜ್ಯದಲ್ಲಿ ಪಾನ್ ಮಸಾಲಾ ಹಾಗೂ ಗುಟ್ಕಾ ನಿಷೇಧಕ್ಕೆ ಸರ್ಕಾರ ತಯಾರಿ

ಬೆಂಗಳೂರು, ಜು.2-

ರಾಜ್ಯದಲ್ಲಿ ಪಾನ್ ಮಸಾಲಾ ಹಾಗೂ ಗುಟ್ಕಾ ಉತ್ಪನ್ನಗಳನ್ನು ಬ್ಯಾನ್ ಮಾಡಲು ತಯಾರಿ ಆರಂಭಿಸಲಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸೂಚನೆ ಬೆನ್ನಲ್ಲೇ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರದ ಅಧಿಕಾರಿಗಳು ರಾಜ್ಯಾದ್ಯಂತ ಎರಡು ದಿನಗಳ ಮೆಗಾ ಡ್ರೈವ್ ಆರಂಭಿಸಿದ್ದಾರೆ.

ಪಾನ್ ಮಸಾಲಾ ಮತ್ತು ಗುಟ್ಕಾ ಮಾರಾಟವಾಗುತ್ತಿರುವ ಅಂಗಡಿಗಳಿಂದ ಅಧಿಕಾರಿಗಳು ಮಾದರಿಗಳನ್ನು (ಸ್ಯಾಂಪಲ್) ಸಂಗ್ರಹಿಸಿ ಪ್ರಯೋಗಾಲಯಕ್ಕೆ ಪರೀಕ್ಷೆಗೆ ಕಳುಹಿಸುತ್ತಿದ್ದಾರೆ.



ಈ ಪರೀಕ್ಷೆಯಲ್ಲಿ ನಿಷೇಧಿತ ಅಥವಾ ಅಮಲಿನ ಅಂಶಗಳು ಪತ್ತೆಯಾದರೆ ಸಂಬಂಧಿತ ಉತ್ಪನ್ನಗಳ ವಿರುದ್ಧ ಕಾನೂನು ಕ್ರಮ ಜತೆಗೆ ರಾಜ್ಯದಲ್ಲಿ ನಿಷೇಧ ಹೇರಲು ಸರ್ಕಾರ ಮುಂದಾಗುವ ಸಾಧ್ಯತೆ ಇದೆ.

ಮಾದಕದ್ರವ್ಯ ಮುಕ್ತ ಕರ್ನಾಟಕ ನಿರ್ಮಾಣದ ಗುರಿಯೊಂದಿಗೆ ಸರ್ಕಾರ ಈ ಕಾರ್ಯಾಚರಣೆ ಕೈಗೊಂಡಿದ್ದು, ಆಹಾರ ಸುರಕ್ಷತಾ ಇಲಾಖೆ ರಾಜ್ಯಾದ್ಯಂತ ತಪಾಸಣೆಯನ್ನು ತೀವ್ರಗೊಳಿಸಿದೆ.

ಪರೀಕ್ಷಾ ವರದಿ ಬಂದ ಬಳಿಕವೇ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು.

ವರದಿಯಲ್ಲಿ ಅಮಲಿನ ಅಂಶ ದೃಢಪಟ್ಟರೆ ಪಾನ್ ಮಸಾಲಾ ಮತ್ತು ಗುಟ್ಕಾ ಉತ್ಪನ್ನಗಳ ಮಾರಾಟದ ಮೇಲೆ ರಾಜ್ಯ ಸರ್ಕಾರ ನಿಷೇಧ ಹೇರುವ ಸಾಧ್ಯತೆ ಇದೆ. ಸರ್ಕಾರದ ಈ ಕ್ರಮದಿಂದ ಪಾನ್-ಗುಟ್ಕಾ ಉತ್ಪಾದಕರು ಹಾಗೂ ವ್ಯಾಪಾರಿಗಳಲ್ಲಿ ಆತಂಕ ಮೂಡಿದ್ದು, ಪರೀಕ್ಷಾ ಫಲಿತಾಂಶದತ್ತ ಎಲ್ಲರ ಚಿತ್ತ ನೆಟ್ಟಿದೆ.

ಸಕ್ಕರೆ ಕಾರ್ಖಾನೆ ಮಾಲಿಕರ, ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಸಭೆ

ಕಬ್ಬಿನ ಬಾಕಿ ಪಾವತಿಗೆ ಕಟ್ಟುನಿಟ್ಟಿನ ಕ್ರಮ : ಡಿಸಿ ಸಂಗಪ್ಪ



ಬಾಗಲಕೋಟೆ, ಜು.02-

ಜಿಲ್ಲೆಯ ಕಬ್ಬು ಬೆಳೆಗಾರರಿಗೆ ಬಾಕಿ ಉಳಿದಿರುವ ಬಿಲ್ ಪಾವತಿಯನ್ನು ಶೀಘ್ರವಾಗಿ ಬಿಡುಗಡೆ ಮಾಡುವಂತೆ ಸಂಬಂಧಿಸಿದ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗೆ ಜಿಲ್ಲಾಧಿಕಾರಿ ಸಂಗಪ್ಪ ಕಟ್ಟು ನಿಟ್ಟಿನ ಸೂಚನೆ ನೀಡಿದರು.


ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸಕ್ಕರೆ ಕಾರ್ಖಾನೆ ಮಾಲಿಕರ ಹಾಗೂ ವ್ಯವಸ್ಥಾಪಕ ನಿರ್ದೇಶಕರುಗಳೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರೈತರು ಪೂರೈಸಿದ ಕಬ್ಬಿನ ಹಣವನ್ನು ನಿಗದಿತ ಅವಧಿಯೊಳಗೆ ಪಾವತಿಸುವುದು ಕಾರ್ಖಾನೆಗಳ ಜವಾಬ್ದಾರಿಯಾಗಿದೆ. ಯಾವುದೇ ಕಾರಣಕ್ಕೂ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕದಂತೆ ಬಾಕಿ ಮೊತ್ತವನ್ನು ತ್ವರಿತವಾಗಿ ಪಾವತಿ ಮಾಡುವಂತೆ ಸೂಚಿಸಿದರು. ರೈತರ ಹಿತಾಶಕ್ತಿಗೆ ಯಾವುದೇ ರೀತಿಯ ಧಕ್ಕೆಯಾಗದಂತೆ ಅಧಿಕಾರಿಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸುವಂತೆ ನಿರ್ದೇಶನ ನೀಡಿದರು.

ಸಕ್ಕರೆ ಕಾರ್ಖಾನೆಗಳು ಘೋಷಿಸಿದ ದರದಂತೆ ಕುಂದರಗಿ ಜೆಮ್ ಶುಗರ್ಸ್ ಮತ್ತು ಹಿರೇಪಡಸಲಗಿಯ ಜಮಖಂಡಿ ಶುಗರ್ಸ್ ನವರು ಸೇರಿ ಒಟ್ಟು 13.74 ಕೋಟಿ ರೂ.ಗಳ ಬಾಕಿ ಉಳಿಸಿಕೊಂಡಿದ್ದಾರೆ. ಬಾಕಿ ಹಣವನ್ನು ಪಾವತಿಗೆ ವಾರದ ಗುಡುವು ನೀಡಿದರು. ಅದೇ ರೀತಿ ಸರಕಾರದಿಂದ ಪ್ರತಿ ಟನ್‌ಗೆ 50 ರೂ.ಗಳಂತೆ ನೀಡಲಾದ ಮೊತ್ತವನ್ನು ಶೇ.100 ರಷ್ಟು ಕಾರ್ಖಾನೆಗಳು ರೈತರಿಗೆ ಪಾವತಿಸಿದ್ದು, ಕಾರ್ಖಾನೆಯಿಂದ ಪ್ರತಿ ಟನ್‌ಗೆ 50 ರೂ.ಗಳಂತೆ 5 ಕಾರ್ಖಾನೆಗಳು ಮೊತ್ತ ಪಾವತಿಸಿದ್ದಾರೆ. 9 ಸಕ್ಕರೆ ಕಾರ್ಖಾನೆಗಳು ಮಾತ್ರ ಬಾಕಿ ಉಳಿಸಿಕೊಂಡಿದ್ದು, ತುರ್ತಾಗಿ ಪಾವತಿಗೆ ಮುಂದಾಗಬೇಕು ಎಂದು ತಿಳಿಸಿದರು.

ಉಂಟಾಗುವ ಹವಾಮಾನದ ವೈಪರಿತ್ಯ ಹಾಗೂ ಪರಿಸರ ಸಮತೋಲನ ಕಾಪಾಡುವ ನಿಟ್ಟಿನಲ್ಲಿ ಸಸಿ ನೆಡುವ ಆಂದೋಲವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ. ಇದರ ಭಾಗವಾಗಿ ಈಗಾಗಲ ಜಿಲ್ಲೆಯಲ್ಲಿರುವ ವಿವಿಧ ಸಕ್ಕರೆ ಕಾರ್ಖಾನೆಗಳು ತಮ್ಮ ಸಿಎಸ್‌ಆರ್ ನಿಧಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಅರಣ್ಯ ಇಲಾಖೆಯವರು ಗುರುತಿಸಿದ ಸ್ಥಳಗಳಲ್ಲಿ ಪ್ರತಿ ಸಕ್ಕರೆ ಕಾರ್ಖಾನೆಗಳು ತಲಾ 10 ಸಾವಿರದಂತೆ ಸಸಿಗಳನ್ನು ನೆಡಲು ತಿಳಿಸಲಾಗಿತ್ತು. ಈ ಹಿನ್ನಲೆಯಲ್ಲಿ ಕಾರ್ಖಾನೆಗಳು ಒಂದೊಂದು ಸಾವಿರ ಗಿಡಗಳನ್ನು ನೆಟ್ಟಿದ್ದು, ಈ ಪ್ರಕ್ರಿಯೆ ಮುಂದುವರಿಸಿ ತಮಗೆ ನಿಗದಿಪಡಿಸಿದ ಗುರಿಯನ್ನು ತಲುಪಲು ತಿಳಿಸಿದರು. ಇದರ ಜೊತೆಗೆ ಸರಕಾರಿ ಶಾಲಾ-ಕಾಲೇಜುಗಳ ಆವರಣದಲ್ಲಿ ಸಸಿಗಳನ್ನು ನೆಡಲು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಅಹೀರೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಸೇರಿದಂತೆ ವಿವಿಧ ಸಕ್ಕರೆ ಕಾರ್ಖಾನೆಗಳ ಮಾಲಿಕರು ಹಾಗೂ ವ್ಯವಸ್ಥಾಪನ ಮಂಡಳಿಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಅನುದಾನಿತ ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಹಣ ವಸೂಲಿ ನಿಲ್ಲಿಸಿ-ಹಿಮಾಲಯ ಸಿಂಗೆ



ಅಫಜಲಪುರ ತಾಲೂಕಿನ ಮಾಶಾಳ ಗ್ರಾಮದ ಸರ್ಕಾರಿ ಅನುದಾನಿತ 'ಸೇವಾ ನಿಕೇತನ' ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಆಡಳಿತ ಮಂಡಳಿಯು ದುರುದ್ದೇಶದಿಂದ ಭ್ರಷ್ಟಾಚಾರದಲಿ ತೊಡಗಿರುವುದರ ಬಗೆ, ಹಾಗೂ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೆಗೊಳ್ಳುವಂತೆ ಜಯಕರ್ನಾಟಕ ಸಂಘಟನೆ ಯುವ ಘಟಕದ ಅಧ್ಯಕ್ಷ ಹಿಮಾಲಯ ಸಿಂಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.


ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅಫಜಲಪುರ ತಾಲ್ಲೂಕಿನ ಮಾಶಾಳ ಗ್ರಾಮದ ಸರ್ಕಾರಿ ಅನುದಾನಿತ ಸೇವಾ ನಿಕೇತನ ಶಾಲೆಯಲ್ಲಿ ಓದುತ್ತಿರುವ ವಿದ್ಯಾರ್ಥಿಯೊಬ್ಬನಿಗೆ ಮೊರಾರ್ಜಿ ದೇಸಾಯಿ ವಸತಿ ನಿಲಯದಲ್ಲಿ ಪ್ರವೇಶ ದೊರೆತಿದ್ದು, ಆತನ ಮುಂದಿನ ವಿದ್ಯಾಭ್ಯಾಸಕ್ಕಾಗಿ ಶಾಲಾ ವರ್ಗಾವಣೆ ಪತ್ರವನ್ನು ಪಡೆಯಲು ಆತನ ಪೋಷಕರು ತೆರಳಿದಾಗ, ಶಾಲೆಯ ಮುಖ್ಯೋಪಾಧ್ಯಾಯರು ದಾಖಲೆಗಳನ್ನು ನೀಡಲು 2000 ರೂಪಾಯಿ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ. ಈ ಅಕ್ರಮ ಹಣವನ್ನು ಅವರು ಕುರ್ಚಿ, ಟೇಬಲ್ ಮತ್ತು ಗಡಿಯಾರದಂತಹ ಶಾಲಾ ಸಾಮಗ್ರಿಗಳನ್ನು ಖರೀದಿಸಲು ಕಾಣಿಕೆ ರೂಪದಲ್ಲಿ ಕೊಡಬೇಕು ಎಂದು ಪೋಷಕರನ್ನು ಬಲವಂತಪಡಿಸುತ್ತಿರುತ್ತಾರೆ. ಲಂಚದ ಹಣವನ್ನು ಕೊಡದಿದ್ದಲ್ಲಿ ವಿದ್ಯಾರ್ಥಿಗೆ ಶಾಲಾ ದಾಖಲಾತಿಗಳನ್ನು ನೀಡುವುದಿಲ್ಲ ಎಂದು ನೇರವಾಗಿ ಬೆದರಿಕೆ ಹಾಕಿರುತ್ತಾರೆ.


ಸರ್ಕಾರಿ ಅನುದಾನಿತ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಅವರ ಆಡಳಿತ ಮಂಡಳಿಯು 'ಬಡ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಾ, ಈ ರೀತಿಯ ಅನೈತಿಕ ಮತ್ತು ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವುದು ನಾಗರಿಕ ಸಮಾಜಕ್ಕೆ ಶೋಭೆ ತರುವುದಿಲ್ಲ ಹಾಗೂ ಶಿಕ್ಷಣ ಇಲಾಖೆಯ ನಿಯಮಾವಳಿಗಳ ಕಟ್ಟುನಿಟ್ಟಾಗಿ ಉಲ್ಲಂಘಿಸುತ್ತಿದ್ದಾರೆ.

ಆದ್ದರಿಂದ, ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ತಕ್ಷಣವೇ ಸೂಕ್ತ ತನಿಖೆ ನಡೆಸಿ, ಸದರಿ ಮುಖ್ಯೋಪಾಧ್ಯಾಯರ ಹಾಗೂ ಸಂಬಂಧಿತ ಶಾಲಾ ಆಡಳಿತ ಮಂಡಳಿಯ ವಿರುದ್ಧ ಕಠಿಣವಾದ ಇಲಾಖಾ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕಾಗಿ ಮತ್ತು ವಿದ್ಯಾರ್ಥಿಯ ಮುಂದಿನ ವ್ಯಾಸಂಗಕ್ಕೆ ತೊಂದರೆಯಾಗದಂತೆ ವರ್ಗಾವಣೆ ಪತ್ರ, ಹಾಗೂ ಇತರೆ ದಾಖಲಾತಿಗಳು ಉಚಿತವಾಗಿ ದೊರಕುವಂತೆ ತಕ್ಷಣವೇ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ನಾಳೆ ಶಾಂತಲಿಂಗ ಶಿವಾಚಾರ್ಯರ 18ನೇ ಪುಣ್ಯಸ್ಮರಣೋತ್ಸವ

ಅಫಜಲಪುರ: ಪಟ್ಟಣದ ಶ್ರೀ ಗುರು ಮಳೇಂದ್ರ ಶಿವಾಚಾರ್ಯರ ಮಠದ 18 ನೇ ಪೀಠಾಧಿಪತಿ ಲಿಂ.ಷ.ಬ್ರ. ಶ್ರೀ ಶಾಂತವೀರ ಮಳೇಂದ್ರ ಶಿವಾಚಾರ್ಯರ 18ನೇ ಪುಣ್ಯಸ್ಮರಣೋತ್ಸವ ಅಂಗವಾಗಿ ಜುಲೈ 3ರಂದು ಮಠದ ಆವರಣದಲ್ಲಿ





ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ಶ್ರೀಮಠದ ಕಮಿಟಿ ಸದಸ್ಯರು ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲಿಂ. ಷ. ಬ್ರ. ಶ್ರೀ ಶಾಂತವೀರ ಮಳೇಂದ್ರ ಶಿವಾಚಾರ್ಯರು ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಅನೇಕ ಸೇವಾ ಕಾರ್ಯಗಳನ್ನು ನಡೆಸುವ ಮೂಲಕ ಈ ಭಾಗದಲ್ಲಿ ಸೌಹಾರ್ದತೆ, ಭಾವೈಕ್ಯತೆ ಮತ್ತು ಮಾನವೀಯ ಮೌಲ್ಯಗಳನ್ನು ಸಾರಿದ ಮಹನೀಯರಾಗಿದ್ದರು. ಅವರ ಪುಣ್ಯಸ್ಮರಣೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುವ ಉದ್ದೇಶದಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಕರ್ತೃ ಗದ್ದುಗೆಗೆ ವಿಶೇಷ ಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಲಬುರಗಿಯ ಶಾಂತಾ ಮಲ್ಟಿಸ್ಪೆಷಾಲಿಟಿ ಹಾಸ್ಪಿಟಲ್ಲ ಡಾ.ಸಂಜೀವಕುಮಾರ ಪಾಟೀಲ್ ಹಾಗೂ ಡಾ. ಅಂಬಿಕಾ ಪಾಟೀಲ್ ಅವರ ನುರಿತ ವೈದ್ಯಕೀಯ ತಂಡದ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಶಿಬಿರದಲ್ಲಿ ನೇತ್ರ ತಪಾಸಣೆ, ಮೂಲವ್ಯಾಧಿ, ಹೊಟ್ಟೆನೋವು ಸಂಬಂಧಿತ ಕಾಯಿಲೆಗಳು, ಕೀಲು ನೋವು ಹಾಗೂ ಸಂಧಿವಾತ, ಹೃದ್ರೋಗ, ಕಿಡ್ನಿ, ಚರ್ಮರೋಗ, ಕಿವಿಮೂಗುಗಂಟಲು (ಇಎಖ) ತಪಾಸಣೆ, ಮಕ್ಕಳ ಕಾಯಿಲೆಗಳ ತಪಾಸಣೆ ಸೇರಿದಂತೆ ವಿವಿಧ ಆರೋಗ್ಯ ಸೇವೆಗಳು ಉಚಿತವಾಗಿ ಲಭ್ಯವಿರಲಿವೆ.

ಸಾರ್ವಜನಿಕರು ಈ ಉಚಿತ ಆರೋಗ್ಯ ತಪಾಸಣಾ ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಮಠದ ಕಮಿಟಿ ಮುಖಂಡರು ಮನವಿ ಮಾಡಿದ್ದಾರೆ.



ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಜಾಗೃತಿ ಜಾಥಾ

ವಿಜಯನಗರ,ಜು.02-

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಮಂಗಳವಾರ 2026 ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಗರದ ವಡಕರಾಯನ ದೇವಸ್ಥಾನದಿಂದ ಶಾನುಭೋಗ ವೃತ್ತದ ವರೆಗೆ ಮತದಾರರ ಜಾಗೃತಿ ಜಾಥಕ್ಕೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಮತದಾರರ ಜಾಗೃತಿ ಜಾಥ ಕಾರ್ಯಕ್ರಮವು ನಗರದ ವಡಕರಾಯನ ದೇವಸ್ಥಾನದಿಂದ ಆರಂಭವಾಗಿ ನಂತರ ಪಂಚಮುಖಿ ಆಂಜನೇಯ, ದೊಡ್ಡ ಮಸೀದಿ, ಗಾಂಧಿ ಚೌಕ್, ಪುಣ್ಯಮೂರ್ತಿ ವೃತ್ತ, ಬಸ್ ನಿಲ್ದಾಣ ಮಾರ್ಗವಾಗಿ ಚಲಿಸಿ ಪುನೀತ್ ರಾಜ್ ಕುಮಾರ್ ವೃತ್ತ ಬಳಿ ಮುಕ್ತಾಯಗೊಂಡಿತು.

ಈ ವೇಳೆ ಅಪರ ಜಿಲ್ಲಾಧಿಕಾರಿ ಈ. ಬಾಲಕೃಷ್ಣ, ಉಪವಿಭಾಗಾಧಿಕಾರಿ ಪಿ.ವಿವೇಕಾನಂದ, ತಹಶೀಲ್ದಾರ್ ಶೃತಿ. ಎಂ. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮನೋಹರ್, ನಗರಸಭೆ ಪೌರಾಯುಕ್ತ ಎರಗುಡಿ ಶಿವಕುಮಾರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

ಕೊಪ್ಪಳ-ತಳಕಲ್-ಜಿಲ್ಲಾಧಿಕಾರಿಗಳ ಕಛೇರಿ ಮಾರ್ಗದಲ್ಲಿ ನಗರ ಸಾರಿಗೆ ಆರಂಭ

ನೂತನ ಬಸ್ ಸಂಚಾರಕ್ಕೆ ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಚಾಲನೆ

ಕೊಪ್ಪಳ ಜು.02-

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗದ ವತಿಯಿಂದ ಕೊಪ್ಪಳ-ತಳಕಲ್-ಜಿಲ್ಲಾಧಿಕಾರಿಗಳ ಕಛೇರಿ ಮಾರ್ಗದಲ್ಲಿ ಇಂದಿನಿಂದ (ಜುಲೈ 1ರಿಂದ) ನೂತನ ನಗರ ಸಾರಿಗೆ ಆರಂಭಿಸಲಾಗಿದೆ.



ಈ ನೂತನ ಬಸ್ ಸಂಚಾರಕ್ಕೆ ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಬುಧವಾರ ಕೊಪ್ಪಳ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಇದೇ ವೇಳೆ ಶಾಸಕರು ಮಾತನಾಡಿ, ಕೊಪ್ಪಳ-ತಳಕಲ್-ಡಿಸಿ ಆಫೀಸ್ ಮಾರ್ಗದಲ್ಲಿ ನೂತನ ನಗರ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಬೇಕೆಂಬ ಸಾರ್ವಜನಿಕ ಪ್ರಯಾಣಿಕರ ಮನವಿಗೆ ಸ್ಪಂದಿಸಿ, ನೂತನ ಬಸ್ ಸಂಚಾರವನ್ನು ಆರಂಭಿಸಲಾಗಿದೆ. ಇದರಿಂದ ಸಾರ್ವಜನಿಕರಿಗೆ ಕೊಪ್ಪಳ ನಗರ ಸಂಚಾರ ಮತ್ತು ಜಿಲ್ಲಾಸ್ಪತ್ರೆ, ಜಿಲ್ಲಾಧಿಕಾರಿಗಳ ಕಛೇರಿಗೆ ತೆರಳಲು ಅನುಕೂಲವಾಗಲಿದೆ. ತಳಕಲ್ ಇಂಜಿನಿಯರಿಂಗ್ ಕಾಲೇಜು, ಕೊಪ್ಪಳ ವಿಶ್ವವಿದ್ಯಾಲಯಕ್ಕೆ ಹೋಗುವ ವಿದ್ಯಾರ್ಥಿಗಳಿಗೂ ನೂತನ ಬಸ್ ಸಂಚಾರವು ಸಹಕಾರಿಯಾಗಲಿದೆ. ಅಲ್ಲದೇ ನಮ್ಮ ರಾಜ್ಯ ಸರ್ಕಾರದ ಶಕ್ತಿ ಯೋಜನೆಯಡಿ ಮಹಿಳಾ ಫಲಾನುಭವಿಗಳು ಈ ನಗರ ಸಾರಿಗೆ ಮೂಲಕ ಉಚಿತ ಬಸ್ ಪ್ರಯಾಣದ ಸೌಲಭ್ಯವನ್ನು ಸಹ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಜಿ. ಗೊಂಡಬಾಳ, ಕೊಪ್ಪಳ ತಾಲ್ಲೂಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್, ಸದಸ್ಯರಾದ ಪರುಶುರಾಮು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗೀಯ ನಿಯಂತ್ರಣಾಧಿಕಾರಿ ಜಿ. ಸಿನಯ್ಯ, ಕಾರ್ಮಿಕ ಕಲ್ಯಾಣ ಅಧಿಕಾರಿ ಸತ್ಯನಾರಾಯಣ, ಲೆಕ್ಕಾ ಪತ್ರ ಅಧಿಕಾರಿ ಚಿತ್ತವಡಿಗಪ್ಪ, ಘಟಕ ವ್ಯವಸ್ಥಾಪಕ ಸೇರಿದಂತೆ ಇತರೆ ಜನಪ್ರತಿನಿಧಿಗಳು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗದ ಸಿಬ್ಬಂದಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಹೋಟೆಲ್, ಡಾಬಾಗಳಲ್ಲಿ ಗೃಹ ಬಳಕೆಯ ಸಿಲಿಂಡರ್ ಬಳಸಿದರೆ ಕಾನೂನು ಕ್ರಮ

ಯಾದಗಿರಿ, ಜು.02-

ಜಿಲ್ಲೆಯ ಹೋಟೆಲ್, ರೆಸ್ಟೋರೆಂಟ್ ಹಾಗೂ ಚಹಾ ಅಂಗಡಿಗಳ ಮಾಲೀಕರು ಕಡ್ಡಾಯವಾಗಿ ವಾಣಿಜ್ಯ ಬಳಕೆಯ (ಕಮರ್ಷಿಯಲ್) ಗ್ಯಾಸ್ ಸಿಲಿಂಡರ್ ಸಂಪರ್ಕಗಳನ್ನು ಪಡೆದುಕೊಳ್ಳಬೇಕು. ಒಂದು ವೇಳೆ ನಿಯಮ ಮೀರಿ ಗೃಹ ಬಳಕೆಯ (ಡೊಮೆಸ್ಟಿಕ್) ಸಿಲಿಂಡರ್‌ಗಳನ್ನು ಬಳಸಿದರೆ

ಅಂತಹವರ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಎಚ್ಚರಿಕೆ ನೀಡಿದ್ದಾರೆ.

ಕೇಂದ್ರ ಸರ್ಕಾರವು ಈಗಾಗಲೇ ಹೊಸ ವಾಣಿಜ್ಯ ಬಳಕೆಯ ಸಿಲಿಂಡರ್ ಸಂಪರ್ಕಗಳ ವಿತರಣೆಯನ್ನು ಪ್ರಾರಂಭಿಸಿದೆ.

ಜಿಲ್ಲೆಯ ಎಲ್ಲಾ ಹೋಟೆಲ್, ರೆಸ್ಟೋರೆಂಟ್, ಡಾಬಾ ಮತ್ತು ಚಹಾ ಅಂಗಡಿಗಳ ಮಾಲೀ ಕರು ಅಗತ್ಯ ದಾಖಲೆಗಳೊಂದಿಗೆ ತಮ್ಮ ಹತ್ತಿರದ ಗ್ಯಾಸ್ ಏಜೆನ್ಸಿ ಗೆ ಭೇಟಿ ನೀಡಿ, ತಕ್ಷಣವೇ ಹೊಸ ವಾಣಿಜ್ಯ ಸಿಲಿಂಡರ್ ಸಂಪರ್ಕವನ್ನು ಪಡೆದುಕೊಳ್ಳಬೇಕು. ವಾಣಿಜ್ಯ ಉದ್ದೇಶಗಳಿಗಾಗಿ ಗೃಹ ಬಳಕೆಯ ಸಿಲಿಂಡರ್‌ಗಳನ್ನು ಅಕ್ರಮವಾಗಿ ಬಳಸುವುದು ಕಂಡುಬಂದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಇಲಾಖೆ ಸ್ಪಷ್ಟಪಡಿಸಿದೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಜನಾಂಗೀಯ ನಿಂದನೆ ಎಂಬ ರೋಗ ಮತ್ತು ಫಿಫಾ ಫುಟ್‌ಬಾಲ್

ಕ್ರೀಡೆಯ ನಿಜವಾದ ಗೆಲುವು ಟ್ರೋಫಿಗಳನ್ನು ಗೆಲ್ಲುವುದಲ್ಲ; ಪ್ರತಿಯೊಬ್ಬ ಆಟಗಾರನೂ ಗೌರವ, ಸಮಾನತೆ ಮತ್ತು ಮಾನವೀಯತೆಯೊಂದಿಗೆ ಆಟವಾಡುವ ವಾತಾವರಣವನ್ನು ನಿರ್ಮಿಸುವುದಾಗಿದೆ. ಇಲ್ಲಿ ಗೆಲ್ಲಬೇಕಾಗಿರುವುದು ಯಾವುದೇ ದೇಶವಲ್ಲ, ತಂಡವಲ್ಲ, ಆಟಗಾರನೂ ಅಲ್ಲ, ಕ್ರೀಡೆ ಮಾತ್ರ.

ಈ ಬಾರಿಯ ಫಿಫಾ ವಿಶ್ವಕಪ್ ಹಲವು ಕಾರಣಗಳಿಗೆ ಕುತೂಹಲ ಕೆರಳಿಸಿದೆ. ಮೂವತ್ತರ ಆಚೀಚೆ ಇರುವ ಮೆಸ್ಸಿ , ರೊನಾಲ್ಡೊ, ಎಂಬಾಪೆ, ನೇಮರ್, ಸಾಡಿಯೋ ಮಾನೆ, ಲೂಕ ಮೊಡ್ರಿಕ್, ಮುಹಮ್ಮದ್ ಸಲಾಹ್‌ರಂತಹ ಸ್ಟಾರ್ ಆಟಗಾರರಿಗೆ ಇದು ಕೊನೆಯ ವಿಶ್ವಕಪ್ ಆಗಲಿದೆ. ಇವರು ಕೇವಲ ಆಟಗಾರರಲ್ಲ, ಒಂದು ಪೀಳಿಗೆಯ ಕನಸು, ಪ್ರೇರಣೆ ಮತ್ತು ಫುಟ್ಬಾಲ್‌ನ ದಂತಕತೆಗಳು. ಹಾಗಾಗಿ ಇದು ಕೇವಲ ಕ್ರೀಡಾಕೂಟವಲ್ಲ, ಅಂಕಿಅಂಶಗಳ ಪೇರಿಸುವ ಆಟವಲ್ಲ, ಭಾವನೆಗಳ ಹಬ್ಬ. ಕನಸುಗಳ ಸಂಭ್ರಮ. ಕೋಟ್ಯಂತರ ಅಭಿಮಾನಿಗಳ ಉಸಿರಾಟ. ಇಡೀ ವಿಶ್ವವೇ ಕಾಲ್ಚೆಂಡಿನ ಮಾಂತ್ರಿಕತೆಗೆ ಮಾರುಹೋಗಿದೆ, ಮೋಡಿಗೊಳಗಾಗಿದೆ, ಸಾಕ್ಷಿಯಾಗುತ್ತಿದೆ.

ಫುಟ್‌ಬಾಲ್ ವಿಶ್ವದ ಅತ್ಯಂತ ಜನಪ್ರಿಯ ಕ್ರೀಡೆ. ದೇಶ, ಧರ್ಮ, ಭಾಷೆ, ಜಾತಿ, ವರ್ಣ, ಹಣ ಎಂಬ ಎಲ್ಲ ಗಡಿಗಳನ್ನು ದಾಟಿ ಜನರನ್ನು ಒಂದುಗೂಡಿಸುವ ಸಾಮರ್ಥ್ಯ ಈ ಆಟಕ್ಕಿದೆ. ಅದೆಲ್ಲವೂ ಈಗ ವಿಶ್ವಕಪ್ ಫುಟ್‌ಬಾಲ್ ಪಂದ್ಯಾವಳಿಯಲ್ಲಿ ಕಾಣುತ್ತಿದೆ. ಈ ಸಂಭ್ರಮ, ಸಂತೋಷದ ನಡುವೆಯೇ, ಮತ್ತೊಂದು ಮಗ್ಗುಲಿನಲ್ಲಿ ಮಾನವ ಸಮಾಜವನ್ನು ಶತಮಾನಗಳಿಂದ ಕಾಡುತ್ತಿರುವ ವರ್ಣಭೇದ ಅಥವಾ ಜನಾಂಗೀಯ ನಿಂದನೆ() ಎಂಬ ಸಾಮಾಜಿಕ ರೋಗವೂ ಉಲ್ಬಣಿಸುತ್ತಿದೆ. ನಮ್ಮಲ್ಲಿ ಮೇಲ್ಜಾತಿ ಶ್ರೇಷ್ಠವೆನ್ನುವ ಮೂರ್ಖರಿರುವಂತೆ; ಯೂರೋಪ್ ಮತ್ತು ಅಮೆರಿಕಾಗಳಲ್ಲಿ ಬಿಳಿ ತೊಗಲು ಶ್ರೇಷ್ಠವೆನ್ನುವ ಬುದ್ಧಿಗೇಡಿಗಳಿದ್ದಾರೆ. ಫುಟ್ ಬಾಲ್ ಕ್ರೀಡಾಕೂಟದಲ್ಲಿ ಅದು ಎದ್ದು ಕಾಣುತ್ತಿದೆ.

ವಿಶ್ವದ ಅತಿ ದೊಡ್ಡ ಫುಟ್‌ಬಾಲ್ ಸಂಸ್ಥೆಯಾದ ಫಿಫಾ ಹಲವು ವರ್ಷಗಳಿಂದ ವರ್ಣಭೇದದ ವಿರುದ್ಧ ಹಲವು ಕಠಿಣ ಕ್ರಮಗಳನ್ನು ಕೈಗೊಳ್ಳುವ ಮೂಲಕ ಹೋರಾಟ ನಡೆಸುತ್ತಿದೆ. ಈ ಬಾರಿ ಹಲವು ಹೊಸ ನಿಯಮಗಳನ್ನು ಜಾರಿಗೆ ತಂದಿದೆ. ತಂತ್ರಜ್ಞಾನದ ಸಹಕಾರ ಪಡೆದಿದೆ. ಸ್ವಯಂಸೇವಾ ಕಾರ್ಯಕರ್ತರನ್ನು ನಿಯುಕ್ತಿಗೊಳಿಸಿದೆ. ವಿಶೇಷವಾಗಿ ಪ್ರೇಕ್ಷಕರಲ್ಲಿ ಜಾಗೃತಿ ಮೂಡಿಸಲು ಪ್ರಯತ್ನಿಸಲಾಗುತ್ತಿದೆ. ಫಿಫಾ ಅಧ್ಯಕ್ಷ ಜಿಯಾನಿ ಇನ್ಫಾಂಟಿನೊ, ವರ್ಣ ತಾರತಮ್ಯ ಸಹಿಸುವುದಿಲ್ಲ. ಅನುಚಿತವಾಗಿ ವರ್ತಿಸಿದವರನ್ನು ಸುಮ್ಮನೆ ಬಿಡುವುದಿಲ್ಲ ಎಂದು ಘೋಷಿಸಿದ್ದೂ ಆಗಿದೆ. ಫಿಫಾ ತನ್ನ ಸಂವಿಧಾನದಲ್ಲಿಯೇ ಅದನ್ನು ಅಳವಡಿಸಿಕೊಂಡಿದೆ. ವರ್ಣ, ಧರ್ಮ, ಲಿಂಗ, ರಾಷ್ಟ್ರೀಯತೆ ಅಥವಾ ರಾಜಕೀಯ ಅಭಿಪ್ರಾಯದ ಆಧಾರದ ಮೇಲೆ ತಾರತಮ್ಯ ನಡೆಸುವುದು ಶಿಕ್ಷಾರ್ಹ ಅಪರಾಧ ಎಂದು ಸ್ಪಷ್ಟಪಡಿಸಿದೆ.

ಇಷ್ಟಾದರೂ ಆಟಗಾರರ ಮೇಲೆ ಆಗುತ್ತಿರುವ ಜನಾಂಗೀಯ ನಿಂದನೆಗಳು, ಸಾಮಾಜಿಕ ಜಾಲತಾಣಗಳಲ್ಲಿ ನಡೆಯುವ ದ್ವೇಷಪೂರಿತ ಅಭಿಯಾನಗಳು ಮತ್ತು ಪ್ರೇಕ್ಷಕರ ವರ್ತನೆಗಳನ್ನು ನೋಡಿದರೆ, ಇವರು ಈ ಕಾಲದಲ್ಲಿ ಮನುಷ್ಯರಾಗುವುದಿಲ್ಲ ಎನ್ನುವುದು ಸ್ಪಷ್ಟವಾಗುತ್ತದೆ.

ಮೊನ್ನೆ ಇಂಗ್ಲೆಂಡ್ ಮತ್ತು ಘಾನಾ ತಂಡಗಳ ನಡುವಿನ ಪಂದ್ಯದ ವೇಳೆ, ಘಾನಾ ಆಟಗಾರರನ್ನು ಬಹಿರಂಗವಾಗಿಯೇ ನಿಂದಿಸಿದರು. ಛೇಡಿಸಿದರು. ಆಡಿಕೊಂಡು ನಕ್ಕರು. ಸೋಜಿಗದ ಸಂಗತಿ ಎಂದರೆ, ಇಂಗ್ಲೆಂಡ್ ತಂಡದಲ್ಲಿನ 26 ಆಟಗಾರರ ಪೈಕಿ 15 ಮಂದಿ ಕಪ್ಪುವರ್ಣೀಯ ಮತ್ತು ಮಿಶ್ರವರ್ಣೀಯ ಆಟಗಾರರಿದ್ದರು.

ಫುಟ್‌ಬಾಲ್‌ನಲ್ಲಿ ಇದು ಹಲವು ರೂಪಗಳಲ್ಲಿ ಕಾಣಿಸಿಕೊಳ್ಳುತ್ತದೆ. ಕಪ್ಪು ವರ್ಣದ ಆಟಗಾರರನ್ನು ಉದ್ದೇಶಿಸಿ ಕೋತಿಯಂತೆ ಅಣಕಿಸುವುದು, ಕಿಚಾಯಿಸುವುದು, ನಿಂದಿಸುವುದು, ಕೂಗುವುದು, ಅವಹೇಳನಕಾರಿ ಬ್ಯಾನರ್‌ಗಳನ್ನು ಪ್ರದರ್ಶಿಸುವುದು ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ದ್ವೇಷಪೂರಿತ ಸಂದೇಶಗಳನ್ನು ಹರಡುವುದು ನಡೆದೇ ಇದೆ.

ಇತ್ತೀಚಿನ ದಿನಗಳಲ್ಲಿ ವೃತ್ತಿಪರ ಫುಟ್‌ಬಾಲ್‌ನಲ್ಲಿ ಆಫ್ರಿಕಾ, ದಕ್ಷಿಣ ಅಮೆರಿಕ ಮತ್ತು ಏಷ್ಯಾ ಮೂಲದ ಆಟಗಾರರ ಸಂಖ್ಯೆ ಹೆಚ್ಚಾದಂತೆ, ವರ್ಣಭೇದದ ರೋಗವೂ ಹೆಚ್ಚಾಗುತ್ತಿದೆ. ಅಂದರೆ ಕರಿಯರನ್ನು ಕಂಡರೆ ಅಸಹನೆ, ಸಿಟ್ಟು, ದ್ವೇಷಾಸೂಯೆಗಳು ದುಪ್ಪಟ್ಟಾಗುತ್ತಿವೆ. ಅನೇಕ ಆಟಗಾರರು ತಮ್ಮ ಸ್ವಂತ ಶ್ರಮ ಮತ್ತು ಪ್ರತಿಭೆಯಿಂದ ವಿಶ್ವದ ಮೆಚ್ಚುಗೆ ಗಳಿಸಿದರೂ, ಮೈದಾನದ ಒಳಗೆ ಮತ್ತು ಹೊರಗೆ ಜನಾಂಗೀಯ ನಿಂದನೆಗೆ ಗುರಿಯಾಗುವುದು ನಿಲ್ಲದಾಗಿದೆ.

ಮೊನ್ನೆ ಫಿಫಾ ರ್‍ಯಾಂಕಿಂಗ್‌ನಲ್ಲಿ 3ನೇ ಸ್ಥಾನದಲ್ಲಿರುವ ಬಲಿಷ್ಠ ಸ್ಪೇನ್ ತಂಡದ ಆಟಗಾರರಿಗೆ ಒಂದೇ ಒಂದು ಗೋಲು ಹೊಡೆಯದಂತೆ ಕೋಟೆ ಕಟ್ಟಿದ್ದು, 67ನೇ ಸ್ಥಾನದಲ್ಲಿರುವ ಕೇಪ್ ವರ್ಡ್ ತಂಡ. ಹಾಗೆ ನೋಡಿದರೆ, ಕೇಪ್ ವರ್ಡ್ ತಂಡ ಇದೇ ಮೊದಲ ಬಾರಿಗೆ ಅರ್ಹತೆ ಪಡೆದಿದೆ. ಪಶ್ಚಿಮ ಆಫ್ರಿಕಾದ ಕರಾವಳಿಯಿಂದ ಸುಮಾರು 600 ಕಿ.ಮೀ. ದೂರದಲ್ಲಿರುವ, ಕೇವಲ ಐದಾರು ಲಕ್ಷ ಜನಸಂಖ್ಯೆಯಿರುವ, ಫುಟ್‌ಬಾಲ್‌ನಲ್ಲಿ ಅಂಬೆಗಾಲು ಇಡುತ್ತಿರುವ ರಾಷ್ಟ್ರಗಳಲ್ಲಿ ಒಂದಾಗಿದೆ. ಅದ್ಭುತ ಆಟದಿಂದಾಗಿ ನಾಕ್‌ಔಟ್ ಹಂತ ತಲುಪಿದ ಅತಿ ಚಿಕ್ಕ ರಾಷ್ಟ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಇದಕ್ಕೆ ಮುಖ್ಯ ಕಾರಣ, ಗೋಲಿ ವೋಜಿನಾರ ಅದ್ಭುತ ಗೋಲ್‌ಕೀಪಿಂಗ್. ಸಾಮಾನ್ಯವಾಗಿ ಫುಟ್‌ಬಾಲ್ ಆಟಗಾರರು ನಿವೃತ್ತರಾಗುವ ವಯಸ್ಸಿನ, 40ರ ಹರೆಯದ ವೋಜಿನಾರ ಆಟ ಮಿಂಚಿಗೂ ಮೀರಿದ್ದು. 2012ರಿಂದ ಕೇಪ್ ವರ್ಡ್ ರಾಷ್ಟ್ರೀಯ ತಂಡದ ಪ್ರಮುಖ ಗೋಲ್‌ಕೀಪರ್ ಆಗಿರುವ ವೋಜಿನಾ, ವಿಶ್ವಕಪ್‌ನಲ್ಲಿ ಅಮೋಘ ಪ್ರದರ್ಶನ ನೀಡಿ ಎಲ್ಲರ ಮೆಚ್ಚುಗೆ ಗಳಿಸಿದ್ದಾರೆ. ಪಂದ್ಯದ ಬಳಿಕ ತಮ್ಮ ಅಜ್ಜ-ಅಜ್ಜಿ ಹಾಗೂ ಅಮ್ಮನನ್ನು ನೆನೆದು ಭಾವುಕರಾಗಿ ಕಣ್ಣೀರು ಹಾಕಿದ್ದು ಈಗ ಜಗತ್ಪ್ರಸಿದ್ಧವಾಗಿದೆ. ಇಷ್ಟಾದರೂ, ವೋಜಿನಾರನ್ನು ಕೂಡ ಕೆಲವರು ಜನಾಂಗೀಯ ನಿಂದನೆ, ಟ್ರೋಲ್ ಮೂಲಕ ಅವಮಾನಿಸಿದ್ದಾರೆ.

ಜನಾಂಗಭೇದ ಎನ್ನುವುದು ಹೊಸದೇನೂ ಅಲ್ಲ. ಇದು ಅಮೆರಿಕದ ಬಂಡವಾಳಶಾಹಿ ಕ್ರೌರ್ಯ ಮತ್ತು ಯುರೋಪಿನ ವಸಾಹತುಶಾಹಿ ಹಿಂಸೆಯೊಂದಿಗೆ ತಳಕು ಹಾಕಿಕೊಂಡಿದೆ. ಮಾರ್ಟಿನ್ ಲೂಥರ್ ಕಿಂಗ್, ನೆಲ್ಸನ್ ಮಂಡೇಲಾ ಮುಂತಾದ ಮಹಾನ್ ನಾಯಕರು ಜಗತ್ತಿನಲ್ಲಿ ವರ್ಣಭೇದ ನೀತಿಯ ವಿರುದ್ಧ ಹೋರಾಡಿ ಸಮಾನತೆ ಸಾರಿದ ಇತಿಹಾಸವೂ ಇದೆ. ಲ್ಯಾಟಿನ್ ಅಮೆರಿಕಾ ರಾಷ್ಟ್ರಗಳು ಫುಟ್‌ಬಾಲ್ ಕ್ರೀಡೆಯ ಮೇಲೆ ಅಧಿಪತ್ಯ ಸಾಧಿಸಿದ್ದರೂ ಕಡುಬಡ ರಾಷ್ಟ್ರಗಳಾದ ಕ್ಯಾಮರೂನ್, ನೈಜೀರಿಯಾ, ಐವರಿ ಕೋಸ್ಟ್ ದೇಶಗಳು ಕ್ರೀಡೆಯಲ್ಲಿ ಪಾರಮ್ಯ ಮೆರೆಯುತ್ತಿವೆ. ಅಷ್ಟೇ ಅಲ್ಲ, ಈಗ ಚಾಂಪಿಯನ್ ಎನಿಸಿಕೊಂಡ ಬಹುತೇಕ ತಂಡಗಳಲ್ಲಿ ಚುರುಕಾಗಿ ಆಡುವ, ತಮ್ಮ ಪ್ರತಿಭೆಯಿಂದಲೇ ಸ್ಥಾನ ಪಡೆದಿರುವ ಕಪ್ಪುವರ್ಣೀಯ ಆಟಗಾರರಿಲ್ಲದ ತಂಡಗಳೇ ಇಲ್ಲ. ಹೀಗಿದ್ದರೂ ಅವರ ಮೇಲಿನ ಅಸಹನೆ, ದೌರ್ಜನ್ಯ ಮತ್ತು ದ್ವೇಷಾಸೂಯೆಗಳು ನಿಂತಿಲ್ಲ.

ಫುಟ್‌ಬಾಲ್ ಕೇವಲ ಹಣ, ಪ್ರಚಾರ, ಪ್ರತಿಷ್ಠೆ, ಗೋಲು ಗಳಿಸುವ ಆಟವಲ್ಲ; ಅದು ಸಾಮಾಜಿಕ ಬದಲಾವಣೆಯ ಸಾಧನ. ಮೈದಾನಕ್ಕಿಳಿದ ಆಟಗಾರರು, ಆಟಗಾರರಷ್ಟೇ. ಅಲ್ಲಿ ದೇಶ, ಧರ್ಮ, ಜಾತಿ, ಬಣ್ಣಗಳಿಲ್ಲ. ಎಲ್ಲರೂ ಸಮಾನರು. ಈ ಮೌಲ್ಯವನ್ನು ಕಾಪಾಡುವುದು ಕ್ಲಬ್‌ಗಳು, ಆಟಗಾರರು ಮತ್ತು ಅಭಿಮಾನಿಗಳ ಜವಾಬ್ದಾರಿಯಾಗಿದೆ.

ವಿಶ್ವವನ್ನು ಒಂದುಗೂಡಿಸುವ ಶಕ್ತಿ ಫುಟ್‌ಬಾಲ್‌ಗೆ ಇದ್ದರೆ, ವರ್ಣಭೇದವನ್ನು ಸೋಲಿಸುವ ನೈತಿಕ ಹೊಣೆಗಾರಿಕೆಯೂ ಅದಕ್ಕಿದೆ. ಕ್ರೀಡೆಯ ನಿಜವಾದ ಗೆಲುವು ಟ್ರೋಫಿಗಳನ್ನು ಗೆಲ್ಲುವುದಲ್ಲ; ಪ್ರತಿಯೊಬ್ಬ ಆಟಗಾರನೂ ಗೌರವ, ಸಮಾನತೆ ಮತ್ತು ಮಾನವೀಯತೆಯೊಂದಿಗೆ ಆಟವಾಡುವ ವಾತಾವರಣವನ್ನು ನಿರ್ಮಿಸುವುದಾಗಿದೆ. ಇಲ್ಲಿ ಗೆಲ್ಲಬೇಕಾಗಿರುವುದು ಯಾವುದೇ ದೇಶವಲ್ಲ, ತಂಡವಲ್ಲ, ಆಟಗಾರನೂ ಅಲ್ಲ, ಕ್ರೀಡೆ ಮಾತ್ರ.



ಬಡ ಬೀದಿ ಬದಿ ವ್ಯಾಪಾರಿಗಳ ತಳ್ಳುಗಾಡಿಗಳನ್ನೇ ನುಂಗುತ್ತಿರುವ ಗ್ಲೋಬಲ್ ಸಿಟಿಯ ಕನಸು!



ಶ್ರೀಮಂತರ ರಾಜಕಾಲುವೆ ಒತ್ತುವರಿಯಿಂದಾಗಿ ಇಡೀ ಬೆಂಗಳೂರು ಮಳೆಗೆ ಮುಳುಗುತ್ತದೆ, ಕೃತಕ ಪ್ರವಾಹ ಸೃಷ್ಟಿಯಾಗಿ ಜನರ ಜೀವ ಹೋಗುತ್ತದೆ. ಇದು ಇಡೀ ನಗರದ ಪರಿಸರಕ್ಕೆ ಕಂಟಕ ತರುವ ಕ್ರಿಮಿನಲ್ ಅಪರಾಧ. ಆದರೆ ಅಲ್ಲಿ ಸರ್ಕಾರ ಮೃದು ಧೋರಣೆ ತಳೆಯುತ್ತದೆ. ಇತ್ತ, ಫುಟ್‌ಪಾತ್ ಮೇಲೆ ನಾಲ್ಕು ಹಣ್ಣು ಮಾರುವ ಬಡವರ ಹೊಟ್ಟೆಪಾಡಿನ ವ್ಯಾಪಾರವನ್ನು ಮಾತ್ರ ಸರ್ಕಾರ ಮಹಾಪರಾಧ ಎಂಬಂತೆ ಬಿಂಬಿಸುತ್ತದೆ.

ಇತ್ತೀಚೆಗೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರು ಪತ್ರಿಕೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ, ಬೆಂಗಳೂರಿನಲ್ಲಿ ವರ್ಷಕ್ಕೆ ಸುಮಾರು 300 ಪಾದಚಾರಿಗಳು ರಸ್ತೆ ಅಪಘಾತಗಳಲ್ಲಿ ಸಾಯುತ್ತಿದ್ದಾರೆ, ಹಾಗಾಗಿ ಫುಟ್‌ಪಾತ್ ಮುಕ್ತಗೊಳಿಸುವುದು ನಮ್ಮ ನೈತಿಕ ಜವಾಬ್ದಾರಿ ಎಂದು ಮಾತನಾಡಿದ್ದಾರೆ. ವರ್ಷಕ್ಕೆ 300 ಜನ ಸಾಯುತ್ತಿರುವುದು ನಿಜಕ್ಕೂ ಆಘಾತಕಾರಿ ಮತ್ತು ಗಂಭೀರವಾದ ವಿಷಯವೇ. ಆದರೆ, ಸಚಿವರ ಈ ನೈತಿಕ ಕಾಳಜಿ ಕೇವಲ ಬಡ ವ್ಯಾಪಾರಿಗಳನ್ನು ನೋಡಿದಾಗ ಮಾತ್ರ ಏಕೆ ಜಾಗೃತವಾಗುತ್ತದೆ ಎನ್ನುವುದೇ ಇಲ್ಲಿರುವ ಯಕ್ಷಪ್ರಶ್ನೆ. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಅಧಿಕೃತ ವರದಿಯ ಪ್ರಕಾರ, ಬೆಂಗಳೂರಿನಲ್ಲಿ ಪ್ರತಿ 110 ನಿಮಿಷಕ್ಕೆ ಒಂದು ರಸ್ತೆ ಅಪಘಾತ ಸಂಭವಿಸುತ್ತಿದೆ ಮತ್ತು ಪ್ರತಿ 10 ಗಂಟೆಗೆ ಒಬ್ಬ ಅಮಾಯಕ ರಸ್ತೆಯಲ್ಲೇ ಜೀವ ಕಳೆದುಕೊಳ್ಳುತ್ತಿದ್ದಾನೆ! ದೇಶದಲ್ಲೇ ರಸ್ತೆ ಅಪಘಾತ ಮತ್ತು ಸಾವುಗಳಲ್ಲಿ ನಮ್ಮ ಸಿಲಿಕಾನ್ ಸಿಟಿ ಎರಡನೇ ಅತ್ಯಂತ ಕೆಟ್ಟ ನಗರ ಎಂಬ ಅಪಖ್ಯಾತಿಗೆ ಒಳಗಾಗಿದೆ.

ವರ್ಷವೊಂದರಲ್ಲೇ 4,769 ಅಪಘಾತಗಳು ನಡೆದು, ಬರೋಬ್ಬರಿ 894 ಜನ ಹೆಣವಾಗಿ, 4,022 ಜನ ಆಸ್ಪತ್ರೆ ಸೇರಿದ್ದಾರೆ. ಈ ಭೀಕರ ಸಾವುಗಳಿಗೆ ನರಕಸದೃಶ ರಸ್ತೆ ಗುಂಡಿಗಳು, ಸಿಗ್ನಲ್‌ಗಳ ಕೊರತೆ, ಅವೈಜ್ಞಾನಿಕ ರಸ್ತೆ ನಿರ್ಮಾಣ, ಮುರಿದು ಬಿದ್ದ ಫುಟ್‌ಪಾತ್ ಸ್ಲ್ಯಾಬ್‌ಗಳು ಮತ್ತು ಬಿಬಿಎಂಪಿಯ ಭ್ರಷ್ಟಾಚಾರ ಕಾರಣವೇ ಹೊರತು ಫುಟ್‌ಪಾತ್ ಮೇಲಿರುವ ಬಡ ವ್ಯಾಪಾರಿಗಳಲ್ಲ, ರಸ್ತೆಗಳನ್ನು ಸರಿಪಡಿಸಲಾಗದ ಸರ್ಕಾರ, ತನ್ನ ಆಡಳಿತಾತ್ಮಕ ವೈಫಲ್ಯವನ್ನು ಮುಚ್ಚಿಕೊಳ್ಳಲು ಇಡೀ ಅಪಘಾತಗಳ ಹೊಣೆಯನ್ನು ಬಡವರ ಮೇಲೆ ಹೊರಿಸಿ, ಈ ಭೀಕರ ಅಂಕಿ-ಅಂಶಗಳನ್ನು ಬಡವರ ವಿರುದ್ಧದ ಅಸ್ತ್ರವಾಗಿ ಬಳಸುತ್ತಿರುವುದು ಜಿಗುಪ್ಸೆ ತರಿಸುತ್ತದೆ. ಈ ಕಾನೂನು ಮತ್ತು ಪ್ರಭುತ್ವ ಎನ್ನುವುದು ಬಂಡವಾಳಶಾಹಿಗಳ ಹಿತಾಸಕ್ತಿ ಕಾಯುವ ಕಾವಲು ನಾಯಿ'' ಎಂದು ಕಾರ್ಲ್ ಮಾರ್ಕ್ಸ್ ಅಂದೇ ಹೇಳಿದ್ದರು. ಅದಕ್ಕೆ ನಮ್ಮ ಬೆಂಗಳೂರಿಗಿಂತ ದೊಡ್ಡ ಉದಾಹರಣೆ ಬೇಕಿಲ್ಲ. ನಗರದಲ್ಲಿ ಕೋಟಿ ಕೋಟಿ ಲೂಟಿ ಹೊಡೆದು, ನೂರಾರು ಎಕರೆ ರಾಜಕಾಲುವೆಗಳನ್ನು, ಕೆರೆ ಅಂಗಳಗಳನ್ನು ನುಂಗಿ ನೀರು ಕುಡಿದು ನಿಂತಿರುವ ಬೃಹತ್ ಟೆಕ್ ಪಾರ್ಕ್‌ಗಳು, ಐಷಾರಾಮಿ ಮಾಲ್‌ಗಳು ಮತ್ತು ಪ್ರಭಾವಿ ಬಿಲ್ಡರ್‌ಗಳ ಅರಮನೆಗಳ ಮುಂದೆ ಇದೇ ಬಿಬಿಎಂಪಿಯ ಬುಲ್ಡೋಜರುಗಳು ಸೈಲೆಂಟ್ ಆಗಿಬಿಡುತ್ತವೆ. ಅಲ್ಲಿಗೆ ಹೋದರೆ ನಮ್ಮ ಅಧಿಕಾರಿಗಳಿಗೆ ಕಾನೂನಿನ ನೆನಪಾಗುತ್ತದೆ, ನೋಟಿಸ್ ನೀಡಲು ವರ್ಷಗಟ್ಟಲೆ ಬೇಕಾಗುತ್ತದೆ, ಸರ್ವೆಯ ನಾಟಕ ನಡೆಯುತ್ತದೆ. ಕೊನೆಗೆ ಅವರು ಕೋರ್ಟಿನಿಂದ ತಡೆಯಾಜ್ಞೆ ತರಲು ವ್ಯವಸ್ಥೆಯೇ ಪರೋಕ್ಷವಾಗಿ ದಾರಿ ಮಾಡಿಕೊಡುತ್ತದೆ.

ಶ್ರೀಮಂತರ ರಾಜಕಾಲುವೆ ಒತ್ತುವರಿಯಿಂದಾಗಿ ಇಡೀ ಬೆಂಗಳೂರು ಮಳೆಗೆ ಮುಳುಗುತ್ತದೆ, ಕೃತಕ ಪ್ರವಾಹ ಸೃಷ್ಟಿಯಾಗಿ ಜನರ ಜೀವ ಹೋಗುತ್ತದೆ. ಇದು ಇಡೀ ನಗರದ ಪರಿಸರಕ್ಕೆ ಕಂಟಕ ತರುವ ಕ್ರಿಮಿನಲ್ ಅಪರಾಧ. ಆದರೆ ಅಲ್ಲಿ ಸರ್ಕಾರ ಮೃದು ಧೋರಣೆ ತಳೆಯುತ್ತದೆ. ಇತ್ತ, ಬದುಕಲು ಬೇರೆ ದಾರಿಯಿಲ್ಲದೆ ಫುಟ್‌ಪಾತ್ ಮೇಲೆ ನಾಲ್ಕು ಹಣ್ಣು ಮಾರುವ ಬಡವನ ಹೊಟ್ಟೆಪಾಡಿನ ವ್ಯಾಪಾರವನ್ನು ಮಾತ್ರ ಸರ್ಕಾರ ಮಹಾಪರಾಧ ಎಂಬಂತೆ ಬಿಂಬಿಸಿ, ಅವರ ಬದುಕನ್ನು ಬೀದಿಗೆ ತಳ್ಳುತ್ತದೆ. ಇದಕ್ಕಿಂತ ದೊಡ್ಡ ವರ್ಗ ತಾರತಮ್ಯ ಮತ್ತೊಂದಿದೆಯೇ?

ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ವಿಧಿ 14ರಲ್ಲಿ ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂದರು. ಆದರೆ ಬೆಂಗಳೂರಿನಲ್ಲಿ ಕೆರೆ ನುಂಗಿದ ಶ್ರೀಮಂತನಿಗೊಂದು ಕಾನೂನು, ಕೆರೆ ಪಕ್ಕ ತರಕಾರಿ ಮಾರುವ ಬಡವನಿಗೊಂದು ಕಾನೂನು ಚಾಲ್ತಿಯಲ್ಲಿದೆ. ವಿಧಿ 21ರ ಅಡಿಯಲ್ಲಿ ಪ್ರತಿಯೊಬ್ಬ ನಾಗರಿಕನಿಗೂ ಗೌರವಾನ್ವಿತವಾಗಿ ಬದುಕುವ ಮತ್ತು ಜೀವನೋಪಾಯ ಕಂಡುಕೊಳ್ಳುವ ಹಕ್ಕಿದೆ ಎಂದು ಸುಪ್ರೀಂ ಕೋರ್ಟ್ ನೂರಾರು ಬಾರಿ ಹೇಳಿದೆ. ಪರ್ಯಾಯ ವ್ಯವಸ್ಥೆ ಮಾಡದೆ ವ್ಯಾಪಾರಿಗಳನ್ನು ಒಕ್ಕಲೆಬ್ಬಿಸುವುದು ಸಂವಿಧಾನಕ್ಕೆ ಬಗೆಯುವ ದ್ರೋಹವಲ್ಲವೇ?

ಬಡವರ ರಕ್ಷಣೆಗಾಗಿಯೇ ಸಂಸತ್ತು ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ವ್ಯಾಪಾರ ನಿಯಂತ್ರಣ) ಕಾಯ್ದೆ, 2014 ಅನ್ನು ತಂದಿತು. ಈ ಕಾಯ್ದೆಯ ಸೆಕ್ಷನ್ 3(3) ರ ಪ್ರಕಾರ, ನಗರದಲ್ಲಿ ಸಮೀಕ್ಷೆ ನಡೆಸಿ ಎಲ್ಲ ವ್ಯಾಪಾರಿಗಳಿಗೆ ಗುರುತಿನ ಚೀಟಿ ಮತ್ತು ಪರ್ಯಾಯ ವ್ಯಾಪಾರ ವಲಯಗಳನ್ನು ಕಲ್ಪಿಸುವವರೆಗೆ ಯಾರನ್ನೂ ಒಕ್ಕಲೆಬ್ಬಿಸುವಂತಿಲ್ಲ. ಬಿಬಿಎಂಪಿಯು 30,000 ವ್ಯಾಪಾರಿಗಳನ್ನು ಗುರುತಿಸಿ, 230 ಕ್ಕೂ ಹೆಚ್ಚು ವೆಂಡಿಂಗ್ ಜೋನ್‌ಗಳನ್ನು ಪಟ್ಟಿ ಮಾಡಿ ವರ್ಷಗಳೇ ಕಳೆದರೂ, ಇದುವರೆಗೆ ಒಂದೇ ಒಂದು ವಲಯವನ್ನು ಅಧಿಕೃತವಾಗಿ ಜಾರಿ ಮಾಡಿಲ್ಲ, ಒಬ್ಬರಿಗೂ ಐಡಿ ಕಾರ್ಡ್ ಕೊಟ್ಟಿಲ್ಲ, ಶಾಸನಬದ್ಧ ಸಮಿತಿಗಳನ್ನೇ ರಚಿಸದೆ, ಕಾಯ್ದೆಯನ್ನು ಸಂಪೂರ್ಣವಾಗಿ ಗಾಳಿಗೆ ತೂರಿ ನಡೆಸುತ್ತಿರುವ ಈ ಒಕ್ಕಲೆಬ್ಬಿಸುವಿಕೆ ಕಾನೂನುಬಾಹಿರ ಮತ್ತು ಅಸಂವಿಧಾನಿಕ.

ಚುನಾವಣೆ ಬಂದಾಗ ಇದೇ ಬೀದಿ ಬದಿ ವ್ಯಾಪಾರಿಗಳ ಮತಗಳಿಗಾಗಿ ಅವರ ಕಾಲಿಗೆ ಬಿದ್ದು ಭರವಸೆಗಳ ಮಹಾಪೂರ ಹರಿಸುವ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳು, ಆರ್ಥಿಕ ನೀತಿಗಳ ವಿಷಯಕ್ಕೆ ಬಂದರೆ ಒಂದೇ ತಟ್ಟೆಯ ಚೂರುಗಳು! ಅಧಿಕಾರದಲ್ಲಿ ಯಾರೇ ಇರಲಿ, ಬಂಡವಾಳಶಾಹಿಗಳ ಒಲೈಕೆಗಾಗಿ ಬಡವರನ್ನು ಅತಿಕ್ರಮಣಕಾರರು ಎಂದು ಬಿಂಬಿಸಿ ಅವರ ಹೊಟ್ಟೆಯ ಮೇಲೆ ಹೊಡೆಯುವ ಇವರ ದ್ವಂದ್ವ ನಿಲುವು, ಇಡೀ ಪ್ರಜಾಪ್ರಭುತ್ವ ವ್ಯವಸ್ಥೆಯ ಅತಿ ದೊಡ್ಡ ವಿಡಂಬನೆ ಮತ್ತು ಶೋಷಣೆಯಾಗಿದೆ.

ಇದೆಲ್ಲದರ ನಡುವೆ ಸಚಿವ ಕೃಷ್ಣ ಬೈರೇಗೌಡ ಅವರು ಮತ್ತೊಂದು ಸೂತ್ರವನ್ನು ಮುಂದಿಟ್ಟಿದ್ದಾರೆ: ''ವ್ಯಾಪಾರಿಗಳು ಮುಖ್ಯ ರಸ್ತೆ ಬಿಟ್ಟು ಒಳರಸ್ತೆಗಳಿಗೆ ಹೋಗಿ ವ್ಯಾಪಾರ ಮಾಡಲಿ, ಒಳಗಿನ ರಸ್ತೆಗಳೆಲ್ಲಾ ವೆಂಡಿಂಗ್ ಜೋನ್‌ಗಳೇ'' ಎಂದು. ಎಂತಹ ಆಡಳಿತಾತ್ಮಕ ದಿವಾಳಿತನ. ಮುಖ್ಯ ರಸ್ತೆಗಳ ಫುಟ್‌ಪಾತ್‌ಗಳು ಅಗಲವಾಗಿರುತ್ತವೆ, ಆದರೆ ವಸತಿ ಪ್ರದೇಶಗಳ ಒಳರಸ್ತೆಗಳು ಕಿರಿದಾಗಿದ್ದು, ಅನೇಕ ಕಡೆ ಫುಟ್‌ಪಾತ್‌ಗಳೇ ಇರುವುದಿಲ್ಲ. ಹಾಗಿರುವಾಗ ವ್ಯಾಪಾರಿಗಳನ್ನು ಒಳರಸ್ತೆಗಳಿಗೆ ತಳ್ಳಿದರೆ, ಅಲ್ಲಿನ ಪಾದಚಾರಿಗಳ ಗತಿಯೇನು? ಅಂದರೆ, ಕಾರುಗಳಲ್ಲಿ ಓಡಾಡುವ ಶ್ರೀಮಂತರು ಬಳಸುವ ಮುಖ್ಯ ರಸ್ತೆಗಳ ಪಾದಚಾರಿಗಳಿಗೆ ಮಾತ್ರ ಸುರಕ್ಷತೆ ಬೇಕು, ಒಳರಸ್ತೆಗಳಲ್ಲಿ ನಡೆಯುವ ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಸುರಕ್ಷಿತ ನಡಿಗೆಯ ಹಕ್ಕಿಲ್ಲವೇ? ಇದು ಸಮಸ್ಯೆಯನ್ನು ಬಗೆಹರಿಸುವ ಕ್ರಮವಲ್ಲ, ಬದಲಿಗೆ ಸಮಸ್ಯೆಯನ್ನು ಒಂದು ವರ್ಗದಿಂದ ಮತ್ತೊಂದು ವರ್ಗಕ್ಕೆ ವರ್ಗಾಯಿಸುವ ಚಾಣಾಕ್ಷ ತಂತ್ರ ಅಷ್ಟೆ. ಬಂಡವಾಳಶಾಹಿ ನಗರ ಕೇಂದ್ರಗಳಿಂದ ಬಡ ಶ್ರಮಿಕರನ್ನು ಕತ್ತಲಿಗೆ ತಳ್ಳುವ ಸಂಚಿದು.

ನಾವು ಜಾಗತಿಕ ನಗರಗಳ ಉದಾಹರಣೆಗಳನ್ನು ನೋಡುವುದಾದರೆ, ಬಂಡವಾಳಶಾಹಿಯ ಕೇಂದ್ರವಾದ ನ್ಯೂಯಾರ್ಕ್ ಆಗಲಿ ಅಥವಾ ಜಗತ್ಪ್ರಸಿದ್ಧ ಪ್ರವಾಸಿ ನಗರವಾದ ಬ್ಯಾಂಕಾಕ್ ಆಗಲಿ, ಎಲ್ಲೂ ಬೀದಿ ಬದಿ ವ್ಯಾಪಾರವನ್ನು ಕ್ರಿಮಿನಲ್ ಅಪರಾಧ ಎಂದು ನೋಡಿ ಬಡವರನ್ನು ಓಡಿಸಿಲ್ಲ. ಬದಲಿಗೆ ಅವುಗಳನ್ನು ಸೂಕ್ತವಾಗಿ ನಿಯಂತ್ರಿಸಿ, ನಗರದ ಸಂಸ್ಕೃತಿ ಮತ್ತು ಆರ್ಥಿಕತೆಯ ಭಾಗವಾಗಿಸಿಕೊಳ್ಳಲಾಗಿದೆ. ಇನ್ನು ನಮ್ಮದೇ ದೇಶದ ಒಡಿಶಾದ ಭುವನೇಶ್ವರ ನಗರವು 2014ರ ಕಾಯ್ದೆಯನ್ನು ಅತ್ಯಂತ ಯಶಸ್ವಿಯಾಗಿ ಜಾರಿಗೊಳಿಸಿ, ಸುಂದರವಾದ ಅಧಿಕೃತ ವ್ಯಾಪಾರ ವಲಯಗಳನ್ನು ನಿರ್ಮಿಸುವ ಮೂಲಕ ಇಡೀ ದೇಶಕ್ಕೆ ಮಾದರಿಯಾಗಿದೆ. ಮುಂಬೈ ಮತ್ತು ದೆಹಲಿ ಹೈಕೋರ್ಟ್‌ಗಳು ಕೂಡ ಟೌನ್ ವೆಂಡಿಂಗ್ ಕಮಿಟಿ ಇಲ್ಲದೆ ವ್ಯಾಪಾರಿಗಳನ್ನು ಒಕ್ಕಲೆಬ್ಬಿಸುವುದು ಕಾನೂನುಬಾಹಿರ ಎಂದು ತೀರ್ಪು ನೀಡಿವೆ. ಹೀಗಿರುವಾಗ, ಬೆಂಗಳೂರನ್ನು ಜಾಗತಿಕ ನಗರ ಮಾಡುವ ಕನಸು ಕಾಣುವ ಸಚಿವ ಕೃಷ್ಣ ಬೈರೇಗೌಡ ಅವರ ನೇತೃತ್ವದ ಆಡಳಿತ ವ್ಯವಸ್ಥೆಗೆ ಭುವನೇಶ್ವರದ ಮಾದರಿ ಏಕೆ ಕಣ್ಣಿಗೆ ಕಾಣುತ್ತಿಲ್ಲ? ಮುಂಬೈ-ದೆಹಲಿ ಕೋರ್ಟ್‌ಗಳ ಆದೇಶಗಳು ಏಕೆ ಅರ್ಥವಾಗುತ್ತಿಲ್ಲ? ಸಿಂಗಾಪುರದ ಕನಸು ಕಾಣುವ ನಮ್ಮ ಬುಲ್ಡೋಜರುಗಳಿಗೆ ಕೇವಲ ಬಡವರ ತಳ್ಳುಗಾಡಿಗಳು ಮಾತ್ರ ಕಾಣಿಸುತ್ತವೆಯೇ ಹೊರತು, ಕಾನೂನಿನ ಚೌಕಟ್ಟು ಕಾಣಿಸುವುದಿಲ್ಲವೇ?

ಪಾದಚಾರಿಗಳ ಸುರಕ್ಷಿತ ನಡಿಗೆಯ ಹಕ್ಕನ್ನು ಯಾರೂ ನಿರಾಕರಿಸುತ್ತಿಲ್ಲ. ಆದರೆ ನಗರದ ಸೌಂದರ್ಯೀಕರಣದ ಹೆಸರಿನಲ್ಲಿ ಬಡವರ ಹೊಟ್ಟೆಯನ್ನು ಸೀಳಿ ಪಡೆಯುವ ಶಿಸ್ತು ಪ್ರಜಾಪ್ರಭುತ್ವಕ್ಕೆ ಶೋಭೆಯಲ್ಲ. ಬೀದಿ ಬದಿ ವ್ಯಾಪಾರ ಮಾಡುವವರಲ್ಲಿ ಬಹುಪಾಲು ಜನ ದಲಿತರು, ಹಿಂದುಳಿದವರು ಮತ್ತು ಮಹಿಳೆಯರಾಗಿದ್ದಾರೆ. ಬಾಬಾಸಾಹೇಬರ ಸಾಮಾಜಿಕ ನ್ಯಾಯದ ನೀತಿಯ ಪ್ರಕಾರ, ಈ ಶೋಷಿತ ವರ್ಗಗಳಿಗೆ ರಾಜ್ಯ ಸರ್ಕಾರ ವಿಶೇಷ ರಕ್ಷಣೆ ನೀಡಬೇಕಿತ್ತು.

ಕಾನೂನು ಎಲ್ಲರಿಗೂ ಸಮಾನವಾಗಿ ಅನ್ವಯವಾಗಲಿ. ಮೊದಲು ರಾಜಕಾಲುವೆ ಮತ್ತು ಕೆರೆಗಳನ್ನು ನುಂಗಿ ಕುಳಿತಿರುವ ಕಾರ್ಪೊರೇಟ್ ಬಿಲ್ಡರ್‌ಗಳು ಮತ್ತು ಪ್ರಭಾವಿಗಳ ಅಕ್ರಮ ಕಟ್ಟಡಗಳ ಮೇಲೆ ನಿಮ್ಮ ಬುಲ್ಡೋಜರ್‌ಗಳು ಮುಲಾಜಿಲ್ಲದೆ ಚಲಿಸಲಿ. ಅದಾದ ನಂತರ, 2014ರ ಕಾಯ್ದೆಯ ಪ್ರಕಾರ ಟೌನ್ ವೆಂಡಿಂಗ್ ಕಮಿಟಿಗಳನ್ನು ರಚಿಸಿ, ಬಡ ವ್ಯಾಪಾರಿಗಳಿಗೆ ಅಧಿಕೃತ ಗುರುತಿನ ಚೀಟಿ ಹಾಗೂ ಗೌರವಾನ್ವಿತ ವ್ಯಾಪಾರ ವಲಯಗಳನ್ನು ಕಲ್ಪಿಸಿಕೊಡಿ. ಸಮಾಜದ ಕಟ್ಟಕಡೆಯ ಮನುಷ್ಯನ ಹಿತವನ್ನು ಕಾಯುವುದೇ ಸಂವಿಧಾನದ ಆಶಯ. ಬಡವರ ಬದುಕುವ ಹಕ್ಕನ್ನು ಕಸಿದುಕೊಂಡು ಕಟ್ಟುವ ಗ್ಲೋಬಲ್ ಸಿಟಿ ಕೇವಲ ಕಾಂಕ್ರೀಟ್ ಕಾಡಾಗುತ್ತದೆಯೇ ಹೊರತು, ಮಾನವೀಯತೆಯ ನಗರವಾಗಲು ಸಾಧ್ಯವಿಲ್ಲ ಎಂಬುದಷ್ಟೆ ನಾನೊಬ್ಬ ನ್ಯಾಯವಾದಿಯಾಗಿ ಆಗ್ರಹಿಸುವುದು.

ಬೆಳಗಾವಿ ಜಿಲ್ಲೆಯಲ್ಲಿ ಮಳೆ ಕೊರತೆ: ಒಣಗಿದ ಬೆಳೆ, ಕಡಿಮೆಯಾದ ಬಿತ್ತನೆ ಪ್ರಮಾಣ

ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ಮಾಹಿತಿ ಪ್ರಕಾರ, ಬೆಳಗಾವಿ ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ಜಿಲ್ಲೆಯಲ್ಲಿ 146 ಮಿ.ಮೀ ಮಳೆಯಾಗಬೇಕಾಗಿತ್ತು, ಸದ್ಯ ಕೇವಲ 104 ಮಿ.ಮೀ ಮಳೆಯಾಗಿದೆ. ಇದರಿಂದ ಶೇ 29ರಷ್ಟು ಮಳೆ ಕೊರತೆ ದಾಖಲಾಗಿದೆ.

ಪ್ರಸಕ್ತ ಸಾಲಿನ ಮುಂಗಾರು ಕೊರತೆ ಹಾಗೂ ಜೂನ್ ತಿಂಗಳಲ್ಲಿಯೂ ಮುಂದುವರಿದ ಅತಿ ಬಿಸಿಲಿನಿಂದ ಬೆಳಗಾವಿ ಜಿಲ್ಲೆಯ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆಯ ಕೊರತೆಯಿಂದ ಬಿತ್ತನೆಯು ಕಡಿಮೆಯಾಗಿದೆ, ಈಗಾಗಲೇ ಬಿತ್ತಿದ ಬೆಳೆಗಳೂ ಒಣಗುವ ಆತಂಕ ಎದುರಾಗಿದೆ.

ಜಿಲ್ಲೆಯ ತಾಲೂಕುಗಳ ಪೈಕಿ ಬೆಳಗಾವಿ ತಾಲೂಕಿನಲ್ಲಿ ಅತಿ ಹೆಚ್ಚು 105 ಮಿ.ಮೀ ಮಳೆಯಾಗಿದ್ದರೆ, ರಾಮದುರ್ಗ ತಾಲೂಕಿನಲ್ಲಿ ಕೇವಲ 46 ಮಿ.ಮೀ ಪ್ರಮಾಣದ ಕಡಿಮೆ ಮಳೆ ದಾಖಲಾಗಿದೆ. ಮಳೆಯ ಕೊರತೆಯ ಜೊತೆಗೆ ಜೂನ್ ತಿಂಗಳಿಡೀ ಬಿಸಿಲಿನ ಪ್ರಮಾಣ ಹೆಚ್ಚಿದ್ದರಿಂದ ಮುಂಗಾರು ಬೆಳೆಗಳು ಹಾಗೂ ಕಬ್ಬಿನ ಬೆಳೆ ಬಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಹಲವು ಗ್ರಾಮಗಳಲ್ಲಿ ರೈತರು ಹೊಲಗಳನ್ನು ಬಿತ್ತನೆಗೆ ಸಿದ್ಧಪಡಿಸಿಕೊಂಡಿದ್ದರೂ ಮಳೆಯಿಲ್ಲದೆ ಬಿತ್ತನೆ ಮುಂದೂಡಿದ್ದಾರೆ.

ಕೃಷಿ ಇಲಾಖೆಯ ಮಾಹಿತಿಯಂತೆ, ಜಿಲ್ಲೆಯಲ್ಲಿ 7,52,312 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿತ್ತು. ಆದರೆ ಇದುವರೆಗೆ 3,81,887 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದ್ದು, ಒಟ್ಟು ಗುರಿಯ ಶೇ 51ರಷ್ಟು ಮಾತ್ರ ಪ್ರಗತಿ ಸಾಧಿಸಲಾಗಿದೆ.

ಜಿಲ್ಲೆಯಲ್ಲಿ ಹೆಸರು 38,271 ಹೆಕ್ಟೇ, ಭತ್ತ 32,540 ಹೆಕ್ಟೇ, ಸೋಯಾಬಿನ್ 42,405 ಹೆಕ್ಟೇ, ಮೆಕ್ಕೆಜೋಳ 14,820 ಹೆಕ್ಟೇ, ಹತ್ತಿ 99,993 ಹೆಕ್ಟೇರ್ ಹಾಗೂ ಕಬ್ಬು 2,29,229 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಬೆಳೆದಿದೆ. ಆದರೆ ಮಳೆ ಕೊರತೆಯಿಂದ ಕೆಲವು ತಾಲೂಕುಗಳಲ್ಲಿ ಬಿತ್ತನೆ ಇನ್ನೂ ಆರಂಭವಾಗಿಲ್ಲ.

ಅಥಣಿ ತಾಲೂಕಿನಲ್ಲಿ 71,285 ಹೆಕ್ಟೇರ್ ಬಿತ್ತನೆ ಗುರಿ ಹೊಂದಲಾಗಿದ್ದರೂ, ಮಳೆಯ ಅಭಾವದಿಂದ ಕೇವಲ 36,230 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆ ನಡೆದಿದೆ. ತಾಲೂಕಿನ ಹಲವಾರು ಗ್ರಾಮಗಳಲ್ಲಿ ರೈತರು ಹೊಲಗಳನ್ನು ಸಿದ್ಧಪಡಿಸಿಕೊಂಡು ಮಳೆಯ ನಿರೀಕ್ಷೆಯಲ್ಲಿದ್ದಾರೆ.



ಎರಡನೇ ಬಾರಿ ಈರುಳ್ಳಿ ಬಿತ್ತನೆ

ಮಳೆಯ ಕೊರತೆ ಮತ್ತು ಜೂನ್ ತಿಂಗಳಿನಲ್ಲಿ ಹೆಚ್ಚಾದ ತಾಪಮಾನದಿಂದ ಈರುಳ್ಳಿ ಬೆಳೆ ಒಣಗಿದ ಪರಿಣಾಮ ಅನೇಕ ರೈತರು ಈಗಾಗಲೇ ಬಿತ್ತಿದ್ದ ಬೆಳೆಯನ್ನು ಉಳುಮೆ ಮಾಡಿ ಮತ್ತೆ ಜೂನ್ ಕೊನೆಯ ವಾರದಲ್ಲಿ ಬಿತ್ತನೆ ನಡೆಸಿದ್ದಾರೆ. ಇದರಿಂದ ಉತ್ಪಾದನಾ ವೆಚ್ಚ ಹೆಚ್ಚಾಗಿದ್ದು ರೈತರಿಗೆ ಆರ್ಥಿಕ ಹೊರೆಯಾಗಿದೆ.

ಈ ಕುರಿತು ಜತೆ ಮಾತನಾಡಿದ ರೈತ ವಿಠಲ ಸುನಗದ, ''ನಾವು ಎರಡು ಎಕರೆ ಈರುಳ್ಳಿ ಬಿತ್ತಿದ್ದೀವಿ. ಆದ್ರ ಜೂನ್ ತಿಂಗಳೊಳಗ ಸರಿಯಾಗಿ ಮಳೆ ಆಗಲಿಲ್ಲ. ಈರುಳ್ಳಿ ಬೆಳೆಗೆ ತಂಪಾದ ವಾತಾವರಣ ಬೇಕಾಗ್ತದ. ಆದ್ರ 38 ಡಿಗ್ರಿವರೆಗೂ ಬಿಸಿಲು ಬಿದ್ದಿದ್ದರಿಂದ ಬೆಳೆ ಪೂರ್ತಿ ಒಣಗಿ ಹೋಗಿದೆ. ಅದಕ್ಕ ಹೊಲ ಹರಗಿ ಜೂನ್ ಕೊನೆ ವಾರದಲ್ಲಿ ಮತ್ತೊಮ್ಮೆ ಬಿತ್ತನೆ ಮಾಡಬೇಕಾಯ್ತು. ಎರಡು ಎಕರೆ ಈರುಳ್ಳಿ ಬೆಳೆಗೆ ಮೊದಲೇ ಸುಮಾರು ₹10 ಸಾವಿರ ಖರ್ಚಾಗಿತ್ತು. ಈಗ ಮತ್ತೆ ಅಷ್ಟೇ ಖರ್ಚು ಮಾಡಬೇಕಾಯ್ತು. ಈರುಳ್ಳಿ ಬೆಳೆಗೆ 90ರಿಂದ 105 ದಿನ ಬೇಕಾಗ್ತದ. ಒಂದು ಸಲ ಕಳೆ ತೆಗೆಯಾಕ ₹5 ಸಾವಿರ ಖರ್ಚು ಆಗ್ತದ. ನಾಲ್ಕು ಸಲ ಕಳೆ ತೆಗೆಯಬೇಕಾಗ್ತದ. ಅದಲ್ಲದೇ ಎರಡು ಎಕರೆಗೆ ಕಳೆನಾಶಕಕ್ಕೆ ₹1,400 ಖರ್ಚು, ಕೀಟನಾಶಕ ಸಿಂಪಡಣೆಗೂ ಸಾಕಷ್ಟು ಹಣ ಬೇಕಾಗ್ತದ. ಇಂಥಾ ಪರಿಸ್ಥಿತಿಯಲ್ಲಿ ಕೃಷಿ ಇಲಾಖೆ ರೈತರ ನೆರವಿಗೆ ಬರಬೇಕು'' ಎಂದು ಮನವಿ ಮಾಡಿದರು.

ರೈತ ರಮೇಶ ಚಾಕಲಬ್ಬಿ ಮಾತನಾಡಿ, ''ನಾವು ಎಂಟು ಎಕರೆಯಲ್ಲಿ ಹೆಸರು ಬಿತ್ತಿದ್ದೀವಿ. ಈ ವರ್ಷ ಮಳೆಯಾಗದ ಕಾರಣ ಇಳುವರಿ ಕಡಿಮೆ ಆಗಲಿದೆ. ನಾಲ್ಕು ಎಕರೆಯಲ್ಲಿ ಈರುಳ್ಳಿಯೂ ಬಿತ್ತಿದ್ದೀವಿ. ಎಂಟು ಎಕರೆಯಲ್ಲಿ ಕಬ್ಬು ಹಾಕಿದ್ದೀವಿ. ಇನ್ನೂ ಐದಾರು ದಿನದೊಳಗ ಮಳೆ ಆಗದಿದ್ದರ ಕಬ್ಬು ಕೂಡ ಒಣಗುವ ಭಯ ಇದೆ. ಈ ವರ್ಷ ಸರ್ಕಾರ ರೈತರ ಕಷ್ಟಕ್ಕೆ ಸ್ಪಂದಿಸಿ ನೆರವಿನ ಹಸ್ತ ನೀಡಬೇಕಿದೆ'' ಎಂದು ಆಗ್ರಹಿಸಿದರು.

ಮುಂಗಾರು ಆರಂಭದಲ್ಲೇ ಮಳೆ ಕೊರತೆ ಉಂಟಾಗಿರುವುದರಿಂದ ಬಿತ್ತನೆ ಪ್ರಮಾಣ ಕುಸಿದಿದ್ದು, ಬೆಳೆಗಳ ಬೆಳವಣಿಗೆಯ ಮೇಲೂ ಪ್ರತಿಕೂಲ ಪರಿಣಾಮ ಬೀರಿದೆ. ಹೀಗಾಗಿ ಸರ್ಕಾರ ತಕ್ಷಣವೇ ಪರಿಸ್ಥಿತಿ ಪರಿಶೀಲಿಸಿ ಅಗತ್ಯ ನೆರವು ಹಾಗೂ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದು ಜಿಲ್ಲೆಯ ರೈತರ ಮನವಿಯಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR